ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –200 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 28–02–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 02 Issue - 200 | RNI No: KARKAN/2023/88462 | KA/SK/CTA-874/2024-2026 | Chitradurga | Date: 28-02-2025 Friday | Page: 4 | Price: Rs. 2-00

ಒಳಪುಟದ ಸುದ್ದಿಗಳು

ನೃತ್ಯ ಕಲೆಗೆ ಜೀವಂತಿಕೆ ತಂದುಕೊಟ್ಟ ಕೀರ್ತಿ ನೃತ್ಯನಿಕೇತನದ್ದು: ಸಚಿವ 2

ಪರೀಕ್ಷಾ ಪಾವಿತ್ರ್ಯತೆ ಕಾಪಾಡಲು ಜಿಲ್ಲಾಧಿಕಾರಿ ಸೂಚನೆ 3

ಮತೀಯ ಶಕ್ತಿಗಳೊಂದಿಗೆ ಡಿ.ಕೆ.ಶಿ ಕೈಜೋಡಿಸುವುದಿಲ್ಲ: ಉರ್ರಫ್ 4

ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಫೆ.28 ರಂದು ಜೀತಪದ್ಧತಿ ನಿಷೇಧ ಕಾರ್ಯಾಗಾರ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ಮುಕ್ತಿ ಅಲಿಯನ್ಸ್ ಕರ್ನಾಟಕ ಸಂಯುಕ್ತಾಶ್ರಯದಲ್ಲಿ ಇದೇ ಫೆ.28 ರಂದು ಬೆಳಿಗ್ಗೆ 10 ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜೀತ ಪದ್ಧತಿ ನಿರ್ಮೂಲನಾ ದಿನದ ಅಂಗವಾಗಿ "ಜೀತ ಪದ್ಧತಿ ನಿಷೇಧ ಕಾರ್ಯಾಗಾರ" ಆಯೋಜಿಸಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಉದ್ಘಾಟಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ ಸಿಇಒ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಡಾ.ಎನ್.ವೆಂಕಟೇಶ್ ನಾಯ್ಕ್, ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಭಾಗವಹಿಸುವರು. ಸಂಪನ್ಮೂಲ ವ್ಯಕ್ತಿಗಳಾಗಿ ಮುಕ್ತಿ ಅಲಯನ್ಸ್ ಸಂಚಾಲಕರಾದ ಬೃಂದಾ ಅಡಿಗ, ರಾಜೇಂದ್ರನ್ ಹಾಗೂ ಸೌಮ್ಯ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್ ಮಹಿಳಾ ಪತಂಜಲಿ ಯೋಗ ಸಮಿತಿ, ಯುವ ಭಾರತ್, ಪತಂಜಲಿ ಕಿಸಾನ್ ಸೇವಾ ಸಮಿತಿ ಹಾಗೂ ಜ್ಞಾನದೀಪ ವಿದ್ಯಾಮಂದಿರ ಇವರ ಸಂಯುಕ್ತಾಶ್ರಯದಲ್ಲಿ 15 ದಿನಗಳ ಕಾಲ ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರವನ್ನು ಮಾರ್ಚ್ 02 ರಿಂದ 16 ರವರೆಗೆ ಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ಚಿತ್ರದುರ್ಗ ನಗರದ ಜೋಗಿಮಟ್ಟಿ ರಸ್ತೆಯ 5ನೇ ತಿರುವು ಜ್ಞಾನದೀಪ ವಿದ್ಯಾಮಂದಿರದಲ್ಲಿ ಆಯೋಜಿಸಲಾಗಿದೆ. ಮಾರ್ಚ್ 02ರಂದು ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು, ನಗರಸಭೆ ಸದಸ್ಯ ಹೆಚ್.ಶ್ರೀನಿವಾಸ್ ಕಾರ್ಯಕ್ರಮ ಉದ್ಘಾಟನೆ ಮಾಡುವರು. ಜ್ಞಾನದೀಪ ವಿದ್ಯಾಮಂದಿರ ಕಾರ್ಯದರ್ಶಿ ನಾಗರತ್ನ ಟಿ.ಬದರಿನಾಥ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗುತ್ತಿಗೆದಾರ ಈ.ಶಿವಕುಮಾರ್, ದಾವಣಗೆರೆ ಸಬ್‌ರಿಜಿಸ್ಟರ್ ರಾಮಕೃಷ್ಣಪ್ಪ ಭಾಗವಹಿಸುವರು. ಹೆಚ್ಚಿನ ಮಾಹಿತಿಗಾಗಿ 8453462044, 9901585905 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಸಂವಿಧಾನ ರಕ್ಷಾ ಅಭಿಯಾನ

» ಚಿತ್ರದುರ್ಗ

ಕಾಂಗ್ರೆಸ್‌ನ ಪರಿಶಿಷ್ಟ ಪಂಗಡ, ಪರಿಶಿಷ್ಟ ಜಾತಿ, ಅಲ್ಪಸಂಖ್ಯಾತ ಹಾಗೂ ಹಿಂದುಳಿದ ವರ್ಗಗಳ ವಿಭಾಗದವತಿಯಿಂದ ಫೆ.28 ರ ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ನಗರದ ತರಾಸು ರಂಗಮಂದಿರದಲ್ಲಿ ಸಂವಿಧಾನ ರಕ್ಷಾ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಕಾರ್ಯಕ್ರಮವನ್ನು ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಉದ್ಘಾಟಿಸಲಿದ್ದು, ಯೋಜನಾ ಮತ್ತು ಸಾಂಖ್ಯಿಕ ಸಚಿವರಾದ ಡಿ.ಸುಧಾಕರ್ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಮಧು ಬಂಗಾರಪ್ಪ ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ ವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಶಾಸಕರುಗಳಾದ ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಎನ್.ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಿ.ಟಿ.ಶ್ರೀನಿವಾಸ್, ಅಬ್ದುಲ್ ಜಬ್ಬರ್ ಮಾಜಿ ಸಚಿವರಾದ ಹೆಚ್. ಅಂಜನೇಯ, ಮಾಜಿ ಸಂಸದರಾದ ಬಿ.ಎನ್. ಚಂದ್ರಪ್ಪ, ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್, ಅದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ್, ದ್ರಾಕ್ಷರಸ ಮಂಡಳಿ ಅಧ್ಯಕ್ಷರಾದ ಯೋಗಿಶ್ ಬಾಬು, ಅಂಬೇಡ್ಕರ್ ನಿಗಮದ ಅಧ್ಯಕ್ಷರಾದ ಮುಂಡರಗಿ ನಾಗರಾಜ್, ಕಂಠೀರವ ಸ್ಟುಡಿಯೋ ಅಧ್ಯಕ್ಷರಾದ ಮಹಬೂಬ್ ಪಾಷ, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಕೆಡಿಪಿ ಸದಸ್ಯರಾದ ನಾಗರಾಜ್ ಭಾಗವಹಿಸಲಿದ್ದಾರೆ.

ಜಿಲ್ಲಾ ಕೌಶಲ್ಯ ಮಿಷನ್‌ನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

ಉದ್ಯೋಗಮೇಳ ವ್ಯವಸ್ಥಿತವಾಗಿ ಆಯೋಜಿಸಿ

» ಚಿತ್ರದುರ್ಗ

ಬರುವ ಮಾರ್ಚ್ 01 ರಂದು ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಬೃಹತ್ ಉದ್ಯೋಗ ಆಯೋಜಿಸಲಾಗಿದ್ದು, 50 ಕ್ಕೂ ಹೆಚ್ಚು ಕಂಪನಿಗಳು 5 ಸಾವಿರಕ್ಕೂ ಹೆಚ್ಚು ಉದ್ಯೋಗ ನೀಡಲು ಆಗಮಿಸುತ್ತಿದ್ದು, ಈ ಉದ್ಯೋಗ ಮೇಳವನ್ನು ಶಿಸ್ತುಬದ್ಧವಾಗಿ ಆಯೋಜಿಸಲು ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಕೌಶಲ್ಯ ಮಿಷನ್‌ನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೃಹತ್ ಉದ್ಯೋಗ ಮೇಳದಲ್ಲಿ ಸುಮಾರು 50ಕ್ಕೂ ಹೆಚ್ಚು ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲಿದ್ದು, ಜಿಲ್ಲೆಯುಯುವಜನತೆಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲೆಯ ಹೆಚ್ಚು ಅಭ್ಯರ್ಥಿಗಳಿಗೆ ಉದ್ಯೋಗ ಸೃಜಿಸಲು ಕ್ರಮವಹಿಸಬೇಕು ಎಂದು ಹೇಳಿದರು.ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಮೊದಲು ಆನ್‌ಲೈನ್ ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಂಡವರಿಗೆ ಸಂದರ್ಶನಕ್ಕೆ ಮೊದಲ ಆದ್ಯತೆ ಕೊಟ್ಟು, ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳದವರ ನೋಂದಣಿಗೆ ಹೆಚ್ಚಿನ ಮೈದಾನದಲ್ಲಿ ಹೆಚ್ಚಿನ ಕೌಂಟರ್‌ಗಳನ್ನು ಸ್ಥಾಪಿಸಿ, ತ್ವರಿತವಾಗಿ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಿ, ನೋಂದಣಿ ಸಂಖ್ಯೆ, ಟೋಕನ್‌ಗಳನ್ನು ನೀಡಬೇಕು. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಕಂಪನಿಗಳು, ಲಭ್ಯವಿರುವ ಹುದ್ದೆಗಳು ಸೇರಿದಂತೆ ಕಂಪನಿಗಳ ಆಯ್ಕೆ ಕುರಿತು ಪ್ರದರ್ಶನ ಫಲಕಗಳಲ್ಲಿ ಮಾಹಿತಿ ಪ್ರದರ್ಶಿಸಬೇಕು. ಇದರಿಂದ ಉದ್ಯೋಗ ಮೇಳದಲ್ಲಿ ಆಗುವ ಅನಗತ್ಯ ಗೊಂದಲ ತಪ್ಪಿಸಬೇಕು ಎಂದು ಹೇಳಿದರು. ಉದ್ಯೋಗ ಮೇಳವನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಈಗಾಗಲೇ 7 ಉಪಸಮಿತಿಗಳನ್ನು ರಚಿಸಲಾಗಿದೆ. ಈ ಉಪಸಮಿತಿಗಳು ತಮ್ಮ ಹಂತದಲ್ಲಿಯೇ ಪ್ರತ್ಯೇಕ ಸಭೆ ನಡೆಸಿ, ಸಮಿತಿಗಳು ತಮಗೆ ವಹಿಸುವ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಉಪ ಸಮಿತಿಯ ಮುಖ್ಯಸ್ಥರು ಈ ಬಗ್ಗೆ ನಿರ್ದೇಶನ ನೀಡಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಬೇಕು. ಯಾವುದೇ ತರಹದ ವ್ಯತ್ಯಾಸ ಆಗದಂತೆ ನೋಡಿಕೊಳ್ಳಬೇಕು. ಭಾಗವಹಿಸುವ ಪ್ರತಿಷ್ಠಿತ ಕಂಪನಿಗಳಿಗೆ, ಕಂಪನಿಗಳ ಪ್ರತಿನಿಧಿಗಳಿಗೆ ಅಗತ್ಯ ಮೂಲ ಸೌಕರ್ಯ ಹಾಗೂ ಉದ್ಯೋಗ ಆಕಾಂಕ್ಷಿಗಳಿಗೆ ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆ ಮಾಡಬೇಕು.

ಅಭ್ಯರ್ಥಿಗಳಿಗೆ ಯಾವ ಸಂಖ್ಯೆಯ ಮಳಿಗೆಯಲ್ಲಿ ಯಾವ ಕಂಪನಿ, ಹುದ್ದೆಗಳು ಲಭ್ಯವಿದೆ ಎಂಬುದರ ಬಗ್ಗೆ ಧ್ವನಿವರ್ಧಕ ಮೂಲಕ ಮಾಹಿತಿ ನೀಡುವ ವ್ಯವಸ್ಥೆ ಆಗಬೇಕು. ಅಭ್ಯರ್ಥಿಗಳು ಅನಗತ್ಯವಾಗಿ ಗುಂಪು ಗುಂಪಾಗಿ ಓಡಾಡಲು ಅವಕಾಶ ಮಾಡಿಕೊಡದೆ, ಶಿಸ್ತುಬದ್ಧವಾಗಿ ಸಂದರ್ಶನಕ್ಕೆ ಭಾಗಿಯಾಗಲು, ತಂಡಗಳನ್ನು ರೂಪಿಸಿ, ಅಭ್ಯರ್ಥಿಗಳಿಗೆ ಮಾಹಿತಿ ದೊರಕುವ ರೀತಿ ಕೆಲಸ ಮಾಡಬೇಕು. ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ ಮಾತನಾಡಿ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗವು 2022–23ನೇ ಸಾಲಿನಲ್ಲಿ ಸಿಎಂಕೆಕೆವೈ ಯೋಜನೆಯಡಿ ಸ್ವಯಂ ಉದ್ಯೋಗ ಟೈಲರ್‌ನ ಜಾಬ್‌ರೂಲ್‌ನಲ್ಲಿ ತರಬೇತಿ ಪಡೆದ 149 ಫಲಾನುಭವಿಗಳಿಗೆ 149 ಹೊಲಿಗೆ ಯಂತ್ರ ಹಾಗೂ ಟೂಲ್‌ಕಿಟ್‌ಗಳನ್ನು ಸಂಕಲ್ಪ ಯೋಜನೆಯಡಿ ತರಬೇತಿ ಪಡೆದ ಫಲಾನುಭವಿಗಳಿಗೆ ವಿತರಿಸಲು ಈಗಾಗಲೇ ಸರಬರಾಜು ಮಾಡಲಾಗಿದೆ. ವಿಶ್ವಕರ್ಮ ಯೋಜನೆಯಲ್ಲಿ ತರಬೇತಿ ಪಡೆದ ಫಲಾನುಭವಿಗಳನ್ನು ಹೊರತುಪಡಿಸಿದ ಫಲಾನುಭವಿಗಳಿಗೆ ವಿತರಿಸಲು ಸೂಚಿಸಲಾಗಿದೆ. ತರಬೇತಿ ಸಂಸ್ಥೆಗೆ ತರಬೇತಿ ಪಡೆದ ಫಲಾನುಭವಿಗಳ ದಾಖಲಾತಿ ಸಲ್ಲಿಸಿದ ನಂತರ ವಿತರಿಸಲು ಕ್ರಮವಹಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ವಿಶ್ವಕರ್ಮ ಯೋಜನೆಯಡಿ ಮೂರನೇ ಹಂತದಲ್ಲಿ ಪರಿಶೀಲಿಸಲಾದ 39,625 ಫಲಾನುಭವಿಗಳಲ್ಲಿ 34,234 ಫಲಾನುಭವಿಗಳಿಗೆ ತರಬೇತಿ ನೀಡಲಾಗಿರುತ್ತದೆ. ಪ್ರಸ್ತುತ ದರ್ಜಿ, ಬಡಿಗಿ ಮತ್ತು ಮೆಷನ್‌ನಗಳಲ್ಲಿ ನೋಂದಣಿ ಕಾರ್ಯ ಸ್ಥಗಿತಗೊಂಡಿರುವ ಬಗ್ಗೆ ದಿಶಾ ಸಭೆಯಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಮಾಹಿತಿ ನೀಡಿರುತ್ತಾರೆ. ಮತ್ತು ಪ್ರಸ್ತುತ 376 ಫಲಾನುಭವಿಗಳಿಗೆ ತರಬೇತಿ ನೀಡಬೇಕಾಗಿದ್ದು, ನೋಂದಣಿ ಕಾರ್ಯ ಜಿಲ್ಲೆಯಲ್ಲಿ ಕಡಿಮೆ ಇರುತ್ತದೆ. ಪ್ರಸ್ತುತ ವಿಶ್ವಕರ್ಮ ಯೋಜನೆಯ ನಿರ್ವಹಣೆಗೆ ಜಿಲ್ಲಾ ಸಂಯೋಜಕರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಡೇ–ನಲ್ಮ್ ಯೋಜನೆ, ಪಿಎಂ ಸ್ವ–ನಿಧಿ ಮತ್ತು ಸ್ವ–ನಿಧಿ ಸೇ ಸಮೃದ್ಧಿ ಯೋಜನೆಯ ಕುರಿತು ಪ್ರಗತಿ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಉದ್ಯೋಗ ಮೇಳದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ್ ನಾಯ್ಕ್, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ಗಾಯತ್ರಿ, ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಆನಂದ್, ಜಂಟಿ ಕೃಷಿನಿರ್ದೇಶಕ ಮಂಜುನಾಥ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ನಿರಂತರ ವಿದ್ಯುತ್‌ಗೆ ಮನವಿ ಜತೆ ಹೋರಾಟದ ಎಚ್ಚರಿಕೆ

» ಪರಶುರಾಂಪುರ



ದೋಡ್ಡಬೀರನಹಳ್ಳಿ ಹಾಗೂ ಪರಶುರಾಂಪುರ ವ್ಯಾಪ್ತಿಯ ಭಾಗದಲ್ಲಿ ನಿರಂತರವಾಗಿ ರೈತರಿಗೆ ಎಂಟು ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಹಾಗೂ ಇನ್ನಿತರ ಬಗ್ಗೆ ಮನವಿ ಜತೆಗೆ ಹೋರಾಟದ ಎಚ್ಚರಿಕೆ ನೀಡಿದರು.

ಗ್ರಾಮದ ಬೆಸ್ಕಾಂ ಇಲಾಖೆಯ ಹತ್ತಿರ ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಸೇರಿ ಗುರುವಾರ ಬೆಸ್ಕಾಂ ಇಲಾಖೆಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ, ರೈತರ ಹಿತಕ್ಕಾಗಿ ಇಲಾಖೆಯಿಂದ ನೀಡುವ ವಿದ್ಯುತ್ ಸರಬರಾಜಿನಲ್ಲಿ ಬಹಳ ವ್ಯತ್ಯಾಸವಾಗುತ್ತಾ ರೈತರು ತೊಂದರೆ ಅನುಭವಿಸುವಂತಾಗಿದೆ. ಸಮಯ ಪಾಲನೆ ಮಾಡಿ ರೈತರಿಗೆ ಅನುಕೂಲ ಮಾಡಿಕೊಡುವಂತೆ ತಿಳಿಸಿದರು.

ಸಂಘದ ತಾಲೂಕು ಕಾರ್ಯದರ್ಶಿ ಚೌಳೂರು ಪ್ರಕಾಶ್ ಮಾತನಾಡಿ, ಜಮೀನಿನಲ್ಲಿ ವಾಸಿಸುವ ರೈತ ಕುಟುಂಬದವರಿಗೆ ಹಾಗೂ ಓದುವ ವಿದ್ಯಾರ್ಥಿಗಳಿಗೆ ಅನುಕೂಲಕ್ಕಾಗಿ ನಿರಂತರವಾಗಿ ಸಿಂಗಲ್ ಪೇಸ್ ನಲ್ಲಿ ವಿದ್ಯುತ್ ಪೂರೈಕೆ ಆದಲ್ಲಿ ಅನುಕೂಲವಾಗುವುದು. ಯಾವುದೇ ಸೂಚನೆ ಇಲ್ಲದೆ ಏಕಾಏಕಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಾದರೆ ಬೆಳೆ ಉಳಿಸಿಕೊಳ್ಳಲು ಕಷ್ಟವಾಗುವುದು.

ಪುಟ ↘ 2

ಪ್ರತೀ ವರ್ಷ ವಿಧಾನಸೌಧದಲ್ಲಿ ಸಾಹಿತ್ಯ, ಪುಸ್ತಕ ಹಬ್ಬ: ಸಿಎಂ

» ಬೆಂಗಳೂರು

ಪುಸ್ತಕ ಮತ್ತು ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ. ಆದ್ದರಿಂದ ಓದುವ ಅಭ್ಯಾಸ ಹೆಚ್ಚಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ವಿಧಾನಸೌಧದಲ್ಲಿ ಪ್ರಪ್ರಥಮ ಬಾರಿಗೆ ಆಯೋಜಿಸಲಾಗಿರುವ ಪುಸ್ತಕ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ವಿಧಾನಸೌಧದಲ್ಲಿ ಓದುಗರ, ಸಾಹಿತ್ಯಾಸಕ್ತರ ಹಬ್ಬ. ಇದನ್ನು ಸಾಹಿತ್ಯಾಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕು. ಇನ್ನು ಮುಂದೆ ಪ್ರತೀ ವರ್ಷ ವಿಧಾನಸೌಧದಲ್ಲಿ ಸಾಹಿತ್ಯ, ಪುಸ್ತಕ ಹಬ್ಬ ನಡೆಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು. ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ. ಪುಸ್ತಕಗಳನ್ನು ಖರೀದಿಸಿ, ಮನೆ ಮನೆಯಲ್ಲಿ ಗ್ರಂಥಾಲಯ ಮಾಡಿಕೊಳ್ಳಿ. ಮಕ್ಕಳು ಮೊಬೈಲ್ ಮತ್ತು ಡಿಜಿಟಲ್ ಚಟದಿಂದ ಹೊರಗೆ ಬಂದು ಪುಸ್ತಕಗಳನ್ನು ಓದುವ ಹವ್ಯಾಸ, ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಇದೇ ಸಂದರ್ಭದಲ್ಲಿ ಕರೆ ನೀಡಿದರು.

ಪ್ರಮುಖ ಸುದ್ದಿ

ಕ್ಷೇತ್ರ ಮರುವಿಂಗಡಣೆಗೆ ಸಂಬಂಧಿಸಿದಂತೆ ಗೃಹ ಸಚಿವ ಅಮಿತ್ ಶಾ ಹೇಳಿಕೆ ನಂಬಿಕೆಗೆ ಅರ್ಹವಲ್ಲ: ಸಿಎಂ

ಕ್ಷೇತ್ರ ಮರುವಿಂಗಡಣೆ ನಡೆದಾಗ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎನ್ನುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ನಂಬಿಕೆಗೆ ಅರ್ಹವಾಗಿಲ್ಲ. ಇದು ದಕ್ಷಿಣದ ರಾಜ್ಯಗಳಲ್ಲಿ ಗೊಂದಲ ಹುಟ್ಟಿಸುವ ದುರುದ್ದೇಶದಿಂದ ಕೂಡಿದೆ.

ಕೇಂದ್ರ ಗೃಹ ಸಚಿವರ ಬೀಸು ಹೇಳಿಕೆಯನ್ನು ನೋಡಿದರೆ ಅವರಿಗೆ ಒಂದೋ ಮಾಹಿತಿಯ ಕೊರತೆ ಇದೆ, ಇಲ್ಲವಾದರೆ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳಾದ ತೆಲಂಗಾಣ, ತಮಿಳುನಾಡು, ಕೇರಳ ಮತ್ತು ಆಂಧ್ರಪ್ರದೇಶಗಳಿಗೆ ಅನ್ಯಾಯ ಮಾಡುವ ದುರುದ್ದೇಶ ಇದೆ ಎಂದು ಅರ್ಥಮಾಡಿಕೊಳ್ಳಬಹುದು.

ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡಬಾರದೆಂಬ ಸದುದ್ದೇಶ ಕೇಂದ್ರ ಸರ್ಕಾರ ಹೊಂದಿರುವುದಾಗಿದ್ದರೆ ಕ್ಷೇತ್ರ ಮರುವಿಂಗಡಣೆಯನ್ನು ಜನಸಂಖ್ಯೆಯ ಅನುಪಾತದ ಆಧಾರದಲ್ಲಿ ಮಾಡಲಾಗುವುದೋ? ಇಲ್ಲವೇ ಲೋಕಸಭಾ ಸದಸ್ಯರ ಈಗಿನ ಸಂಖ್ಯೆಯ ಅನುಪಾತದಲ್ಲಿ ಮಾಡಲಾಗುವುದೋ? ಎಂಬ ಮುಖ್ಯ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಬೇ

ಫಾಸ್ಟ್ ನ್ಯೂಸ್

ಮಾ. 03 ರಂದು ನಗರಸಭೆ ಕೌನ್ಸಿಲ್ ವಿಶೇಷ ಸಭೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಮಾರ್ಚ್ 03 ರಂದು ಬೆಳಗ್ಗೆ 11ಕ್ಕೆ ನಗರಸಭೆ ಕೌನ್ಸಿಲ್ ವಿಶೇಷ ಸಭೆ ಆಯೋಜಿಸಲಾಗಿದೆ. ನಗರಸಭೆ ಅಧ್ಯಕ್ಷೆ ಬಿ.ಎನ್. ಸುಮಿತಾ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

ಕ್ಷೇತ್ರ ಮರುವಿಂಗಡಣೆಗೆ ಸಂಬಂಧಿಸಿದಂತೆ ಶಾ ಹೇಳಿಕೆ ನಂಬಿಕೆಗೆ ಅರ್ಹವಲ್ಲ: ಸಿಎಂ

» ಮೊದಲ ಪುಟದಿಂದ

ಕರ್ನಾಟಕದ ಜನತೆ ಬಿಜೆಪಿಯನ್ನು ಬೆಂಬಲಿಸದೆ ಇದ್ದರೆ ರಾಜ್ಯಕ್ಕೆ ನರೇಂದ್ರ ಮೋದಿ ಅವರ ಆಶೀರ್ವಾದ ಇರುವುದಿಲ್ಲ ಎಂದು ವಿಧಾನಸಭಾ ಚುನಾವಣಾ ಪ್ರಚಾರದ ಕಾಲದಲ್ಲಿ ಬಿಜೆಪಿ ಅಧ್ಯಕ್ಷರಾದ ಜೆ.ಪಿ.ನಡ್ಡಾ ಅವರು ನೀಡಿದ್ದ ಎಚ್ಚರಿಕೆ ನಮ್ಮ ರಾಜ್ಯದ ವಿರುದ್ಧ ಕೇಂದ್ರ ಸರ್ಕಾರ ಕೈಗೊಳ್ಳುತ್ತಿರುವ ಒಂದೊಂದು ಕ್ರಮದಲ್ಲಿಯೂ ನಿಜವಾಗುತ್ತಿದೆ.ತೆರಿಗೆ ಹಂಚಿಕೆ, ಜಿಎಸ್ ಟಿ ಮತ್ತು ಪ್ರಕೃತಿ ವಿಕೋಪ ಪರಿಹಾರದಲ್ಲಿ ಅನ್ಯಾಯ, ರಾಜ್ಯಕ್ಕೆ ಕಂಟಕವಾಗಿರುವ ಹೊಸ ಶಿಕ್ಷಣ ನೀತಿ ಮತ್ತು ಯುಜಿಸಿ ನಿಯಮಾವಳಿಗಳಿಗೆ ತಿದ್ದುಪಡಿಯೂ ಸೇರಿದಂತೆ ಕೇಂದ್ರ ಸರ್ಕಾರದ ಪ್ರತಿಯೊಂದು ಕ್ರಮವೂ ರಾಜ್ಯವನ್ನು ಶಿಕ್ಷಿಸುವ ದುರುದ್ದೇಶದಿಂದ ಕೂಡಿದೆ ಎನ್ನುವುದು ಸ್ಪಷ್ಟವಾಗುತ್ತಿದೆ.

ಈ ಎಲ್ಲ ಅನ್ಯಾಯದ ವಿರುದ್ಧ ರಾಷ್ಟ್ರಮಟ್ಟದಲ್ಲಿ ದನಿ ಎತ್ತದಂತೆ ಮಾಡಲು ಸಂಸತ್ ನಲ್ಲಿ ದಕ್ಷಿಣದ ರಾಜ್ಯಗಳ ದನಿಯನ್ನು ಇನ್ನಷ್ಟು ಕ್ಷೀಣಗೊಳಿಸುವ ದುರುದ್ದೇಶದಿಂದ ಕೇಂದ್ರದ ಬಿಜೆಪಿ ಸರ್ಕಾರ ಈಗ ಕ್ಷೇತ್ರ ಮರುವಿಂಗಡಣೆಯ ಹೊಸ ಅಸ್ತ್ರವನ್ನು ಎತ್ತಿಕೊಂಡು ಹೊರಟಿದೆ. ರಾಜ್ಯಕ್ಕೆ ಆಗುತ್ತಿರುವ ಸರಣಿ ಅನ್ಯಾಯಗಳನ್ನು ನೋಡಿಯೂ ರಾಜ್ಯದಿಂದ ಲೋಕಸಭೆಗೆ ಆರಿಸಿಹೋಗಿರುವ ಹದಿನೇಳು ಬಿಜೆಪಿ ಮತ್ತು ಇಬ್ಬರು ಜೆಡಿಎಸ್ ಸದಸ್ಯರು ಜೀತದಾಳುಗಳಂತೆ ಬಾಯಿಗೆ ಬೀಗಹಾಕಿಕೊಂಡು ಕೂತಿದ್ದಾರೆ.

ರಾಜ್ಯದ ಬಿಜೆಪಿ ನಾಯಕರು ಪರಸ್ಪರ ಕೆಸರೆರಚಾಟ ನಡೆಸುತ್ತಾ ಬೀದಿ ಜಗಳದಲ್ಲಿ ಮಗ್ನರಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಜಾತಿ–ಧರ್ಮ ಪಕ್ಷ –ಪಂಥಗಳ ಭೇದವನ್ನು ಮರೆತು ಕನ್ನಡಿಗರೆಲ್ಲರೂ ಒಂದಾಗಿ ಒಂದೇ ದನಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧ ದನಿ ಎತ್ತಬೇಕಾಗಿದೆ. ಈ ಅನ್ಯಾಯದ ವಿರುದ್ಧ ಸಮಗ್ರ ರೂಪದ ಹೋರಾಟವನ್ನು ನಡೆಸಲು ನೆರೆಯ ದಕ್ಷಿಣದ ರಾಜ್ಯಗಳ ಜೊತೆಯಲ್ಲಿಯೂ ಮಾತುಕತೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅನ್ಯಾಯಕ್ಕೀಡಾಗಿರುವ ಎಲ್ಲ ರಾಜ್ಯಗಳ ಜೊತೆಗೂಡಿ ಸಂಘಟಿತವಾದ ಹೋರಾಟ ನಡೆಸಲಾಗುವುದು.

ನಿರಂತರ ವಿದ್ಯುತ್‌ಗೆ ಮನವಿ ಜತೆ ಹೋರಾಟದ ಎಚ್ಚರಿಕೆ

» ಮೊದಲ ಪುಟದಿಂದ

ಸರಿಪಡಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ರೈತ ಸಂಘದಿಂದ ಹೋರಾಟ ಮಾಡಲು ನಾವೆಲ್ಲ ಸಿದ್ದರಿದ್ದೇವೆ ಎಂದು ಎಚ್ಚರಿಸಿದರು. ಮನವಿ ಸ್ವೀಕರಿಸಿದ ಬೆಸ್ಕಾಂ ಇಲಾಖೆಯ ಎಸ್ ಓ ಶಿವಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ಸರಿಪಡಿಸುತ್ತಾ ರೈತರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಜತೆ ಸಂಬಂಧ ಪಟ್ಟ ಮೇಲಾಧಿಕಾರಿಗಳ ಗಮನಕ್ಕೂ ತರಲಾಗುವುದು ಎಂದರು. ತಾಲೂಕು ಅಧ್ಯಕ್ಷ ಕೆ.ಚಿಕ್ಕಣ್ಣ, ಉಪಾಧ್ಯಕ್ಷ ಜಂಪಣ್ಣ, ಗೌರವಾಧ್ಯಕ್ಷ ಹನುಮಂತರಾಯ, ಕಾರ್ಯದರ್ಶಿ ಚೌಳೂರು ಪ್ರಕಾಶ್, ತಿಮ್ಮಣ್ಣ, ಖಾದರ್ ಭಾಷೆ, ನವೀನ್ ಗೌಡ,ಕೋಂಡ್ಲಿ ಪರಮೇಶ್ವರಪ್ಪ,ಅಣ್ಣಪ್ಪ,ಮುದ್ದಣ್ಣ, ಹನುಮಂತರಾಯ, ಶಿವಲಿಂಗಪ್ಪ ಸೇರಿದಂತೆ ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬೀದಿ ನಾಟಕ ಕಲಾತಂಡಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಡಿಯಲ್ಲಿ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳು ಮತ್ತು ಯೋಜನೆಗಳ ಬಗ್ಗೆ ಜಾನಪದ ಕಲಾ ಪ್ರಕಾರದಲ್ಲಿ ಬೀದಿ ನಾಟಕಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲು ಕಲಾ ಪ್ರದರ್ಶನ ನೀಡಲು ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಮಾರ್ಚ್ 7 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಐ.ಇ.ಸಿ ವಿಭಾಗ ರೂಂ.ನಂ–3ಕ್ಕೆ ಭೇಟಿ ನೀಡಬೇಕೆಂದು ಜಿಲ್ಲಾ ಆರೋಗ್ಯಾಧಿಕಾರಿ ಷಣ್ಮುಖಪ್ಪ ತಿಳಿಸಿದ್ದಾರೆ.

ಶಿವ ಅಡಂಬರವನ್ನು ಸಹಾ ಬೇಡುವುದಿಲ್ಲ

» ಚಿತ್ರದುರ್ಗ



ಭಕ್ತರ ಭಕ್ತಿಗೆ ಮೆಚ್ಚಿ ಶೀಘ್ರವಾಗಿ ವರವನ್ನು ನೀಡುವ ಯಾವುದಾದರೂ ದೇವರು ಇದ್ದಾರೆ ಎಂದು ಅದು ಶಿವ ಮಾತ್ರ ಎಂದು ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿನ ಶ್ರೀ ಕಬೀರಾನಂದಾಶ್ರಮದಲ್ಲಿ ನಡೆಯುತ್ತಿರುವ 95ನೇ ಮಹಾ ಶಿವರಾತ್ರಿ ಮಹೋತ್ಸವದ ಐದನೇ ದಿನದ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಇಂದು ಶಿವರಾತ್ರಿ ಅಂದರೆ ವರ್ಷದ 364 ದಿನಗಳು ನಮ್ಮ ರಾತ್ರಿಯಾದರೆ ಈ ಒಂದು ದಿನ ಮಾತ್ರ ಶಿವನಿಗೆ ಮೀಸಲಾಗಿದೆ ಇಲ್ಲಿ ಶಿವನ ಸ್ಮರಣೆಯನ್ನು ಮಾಡುವುದರ ಮೂಲಕ ಆತನ ಕೃಪೆಗೆ ಪಾತ್ರರಾಗಬೇಕಿದೆ. ಶಿವ ಯಾವ ಅಡಂಬರವನ್ನು ಸಹಾ ಬೇಡುವುದಿಲ್ಲ ಆತ ಸದಾ ಸರಳವಾದ ದೇವನಾಗಿದ್ದಾನೆ, ಆತನ ಪೂಜೆಯೂ ಸಹಾ ಸರಳವಾಗಿದೆ ಬಿಲ್ವ ಪತ್ರೆಯೊಂದಿಗೆ ಪೂಜೆಯನ್ನು ಮಾಡಿದರೆ ಸಾಕು ಅತ ಭಕ್ತರಿಗೆ ಒಲಿಯುತ್ತಾನೆ ಶಿವನ ಪೂಜೆಯಲ್ಲಿ ತಲೀನವಾದಾಗ ಆತ ಶೀಘ್ರವಾಗಿ ಭಕ್ತರಿಗೆ ಒಲಿಯುತ್ತಾನೆ. ಅವರ ಇಷ್ಟಾರ್ಥಗಳನ್ನು ಈಡೇರಿಸುತ್ತಾನೆ ಎಂದರು.

ಬೇರೆ ದೇವರುಗಳು ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವಲ್ಲಿ ವಿಚಾರವನ್ನು ಮಾಡುತ್ತಾರೆ ಆದರೆ ಶಿವ ತನ್ನ ಭಕ್ತರಿಗೆ ವರವನ್ನು ನೀಡುವಲ್ಲಿ ಯಾವುದೆ ತಡ ಮಾಡದೇ ಶೀಘ್ರವಾಗಿ ವರವನ್ನು ನೀಡುತ್ತಾನೆ, ಅವರ ಇಷ್ಟಾರ್ಥಗಳನ್ನು ಈಡೇರಿಸುತ್ತಾನೆ ಇದಕ್ಕೆ ಅತನ ಮೇಲೆ ಭಕ್ತಿಯೊಂದು ಇರಬೇಕಿದೆ. ಶಿವನ್ನು ಶ್ರದ್ಧೆಯಿಂದ ಪೂಜಿಸಿದರೆ ಮಹಾ ಶಕ್ತಿ ಲಭ್ಯವಾಗುತ್ತದೆ. ಮಹಾ ಶಿವರಾತ್ರಿಯಂದು ಆತನನ್ನು ಧ್ಯಾನ, ಭಜನೆಯನ್ನು ಮಾಡುವುದರ ಮೂಲಕ ಒಲಿಸಿಕೊಳ್ಳಬಹುದಾಗಿದೆ ಎಂದು ಶ್ರೀಗಳು ತಿಳಿಸಿದರು.

ಮೇದಾರ ಗುರುಪೀಠದ ಶ್ರೀ ಇಮ್ಮಡಿ ಬಸವ ಮೇದಾರ ಕೇತೇಶ್ವರ ಶ್ರೀಗಳು ಮಾತನಾಡಿ, ಶಿವನಾಮ ಸ್ಮರಣೆಯನ್ನು ಮಾಡುವುದರ ಮೂಲಕ ಶಿವರಾತ್ರಿಯಂದು ಶಿವನ ಆರಾಧಣೆಯನ್ನು ಮಾಡಬೇಕಿದೆ. ಶಿವನಾಮ ಸಪ್ತಾಹವನ್ನು ಆಚರಣೆ ಮಾಡುವುದರ ಮೂಲಕ ಕಬೀರಾನಂದಾಶ್ರಮದ ಶ್ರೀಗಳು ಭಕ್ತರನ್ನು ಶಿವನ ಬಳಿ ಕರೆದ್ಯೊತ್ತಿದ್ದಾರೆ. ಕಬೀರಾನಂದಾಶ್ರಮ ಮಾತು ಬರುವವರಿಗೂ ಹಾಗೂ ಮಾತು ಬಾರದವರಿಗೂ ಸಹಾ ಆಶ್ರಯವನ್ನು ನೀಡಿದೆ. ಇದ್ದಲ್ಲದೆ ನೊಂದವರಿಗೂ ಸಹಾ ನೆರವಿನ ಹಸ್ತವನ್ನು ನೀಡಿದೆ. ಭಕ್ತರ ಸಂಕಷ್ಟಕ್ಕೆ ಶ್ರೀಗಳು ಸ್ಪಂದಿಸುತ್ತಿದ್ದಾರೆ ಎಂದರು.

ಶಾಸಕರಾದ ಎಂ.ಚಂದ್ರಪ್ಪ ಮಾತನಾಡಿ, ಸಮಾಜದಲ್ಲಿನ ಅಂಕು ಡೊಂಕುಗಳನ್ನು ತಿದ್ದುವ ಕಾರ್ಯವನ್ನು ಈ ಆಶ್ರಮ ಮಾಡುತ್ತಿದೆ. ಶಿಕ್ಷಣ, ದಾಸೋಹ, ಧರ್ಮ ಪ್ರಸಾರ, ಗೋವುಗಳಿಗೆ ಆಶ್ರಯವನ್ನು ನೀಡುವಂತ ಕಾರ್ಯವನ್ನು ಶಿವಲಿಂಗಾನಂದ ಶ್ರೀಗಳು ಮಾಡುತ್ತಿದ್ದಾರೆ. ಇಲ್ಲಿ ಯಾವುದೇ ಜಾತಿ, ಧರ್ಮ ಜನಾಂಗ ಎಂದು ನೀಡದೇ ಎಲ್ಲರನ್ನು ಸಹಾ ಆರ್ಶೀವದಿಸುವ ಕಾರ್ಯವನ್ನು ಶ್ರೀಗಳು ಮಾಡುತ್ತಿದ್ದಾರೆ ಎಂದ ತಿಳಿಸಿದರು.

95ನೇ ಮಹಾ ಶಿವರಾತ್ರಿ ಮಹೋತ್ಸವದ ಅಧ್ಯಕ್ಷರಾದ ವಿಜಯಕುಮಾರ್ ಮಾತನಾಡಿ, ಇಲ್ಲಿ ಈ ಹಿಂದೆ ಗೋಶಾಲೆ ಇತ್ತು ಗೋವುಗಳನ್ನು ಸಂರಕ್ಷಣೆ ಮಾಡುವ ಕಾರ್ಯವಾಗುತ್ತಿತ್ತು ಆದರೆ ಈಗ ಇದು ಪಾಠಶಾಲೆಯಾಗಿದೆ ಮಕ್ಕಳಿಗೆ ಅಕ್ಷರ ದಾಸೋಹವನ್ನು ಮಾಡುವುದರ ಮೂಲಕ ಪ್ರಜ್ಞಾವಂತರನ್ನಾಗಿ ಮಾಡಲಾಗುತ್ತಿದೆ. ಶಿವಲಿಂಗಾನಂದ ಶ್ರೀಗಳ ಹೆಸರಿನಲ್ಲೇ ಶಿವನಿದ್ದಾನೆ, ಶ್ರೀಗಳು ಪ್ರಮಾಣಿಕವಾದ ಭಕ್ತರನ್ನು ಸಂಪಾದಿಸಿದ್ದಾರೆ. ಅನಾಥರಿಗೆ ಸ್ಪಂದಿಸಿ ಮೂಕ ಪ್ರಾಣಿಗಳಿಗೆ ದಾರಿಯನ್ನು ತೋರಿಸಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಪರಿಸರಾಮೃತ ರಾಜ್ಯ ಪ್ರಶಸ್ತಿ ವಿಜೇತರಾದ ಎ.ಜಯರಾಮಯ್ಯ, ಹಾಗೂ ಸುವರ್ಣ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಟಿ.ಸೋಮೇಶ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಸಾನಿಧ್ಯವನ್ನು ಹಾವೇರಿಯ ಕೂಸನೂರಿನ ತಿಪ್ಪಯ್ಯಸ್ವಾಮಿ ಮಠದ ಶ್ರೀ ಜ್ಯೋತಿರ್ಲಿಂಗಾನಂದ ಶ್ರೀಗಳು ವಹಿಸಿದ್ದರು. ನಗರಸಭಾ ಸದಸ್ಯರಾದ ವೆಂಕಟೇಶ್, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದದ ತಿಪ್ಪೇಸ್ವಾಮಿ, ಪಿವಿಎಸ್ ಆಸ್ಪತ್ರೆಯ ಡಾ.ಶೀಧರ ಮೂರ್ತಿ, ಭಾಪೂಜಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಕೆ.ಎಂ.ವಿರೇಶ್, ನಿವೃತ್ತ ಇಂಜಿನಿಯರ್ ವಾಗೀಶ್, ಶಿವಮೊಗ್ಗದ ಬೆನಕಪ್ಪ, ಧರ್ಮ ಪ್ರಸಾದ್, ರಾಮಮೂರ್ತಿ, ಕೆಡಿಪಿ ಸದಸ್ಯರಾದ ನಾಗರಾಜ್ ಸಿದ್ದವ್ವನಹಳ್ಳಿ ಪರಮೇಶ್, ಬದರಿನಾಥ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಶ್ರೀ ಶಾರಾದ ಮೆಲೋಡಿಸ್ ರವರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಸುಬ್ರಾಯ ಭಟ್ಟರು ವೇದ ಘೋಷ ಮಾಡಿದರೆ, ಶ್ರೀಕಾಂತ ಪ್ರಾರ್ಥಿಸಿದರು, ನಿರಂಜನ ಮೂರ್ತಿ ಸ್ವಾಗತಿಸಿದರು ಮುರುಗೇಶ್ ಕಾರ್ಯಕ್ರಮ ನಿರೂಪಿಸಿದರು.

ಕನ್ನೇಶ್ವರ ಆಶ್ರಮದಲ್ಲಿ ಶಿವರಾತ್ರಿ ಸಡಗರ ನೃತ್ಯ ನಿಕೇತನ ಮಕ್ಕಳಿಂದ ನೃತ್ಯ ಪ್ರದರ್ಶನ

ನೃತ್ಯ ಕಲೆಗೆ ಜೀವಂತಿಕೆ ತಂದುಕೊಟ್ಟ ಕೀರ್ತಿ ನೃತ್ಯನಿಕೇತನದ್ದು: ಸಚಿವ ಡಿ.ಸುಧಾಕರ್

» ಚಳ್ಳಕೆರೆ

ಕಳೆದ ಸುಮಾರು 30 ವರ್ಷಗಳಿಂದ ಬಯಲುಸೀಮೆ ಪ್ರದೇಶವಾದ ಚಳ್ಳಕೆರೆ ತಾಲ್ಲೂಕಿನಲ್ಲಿ ಸಂಗೀತ, ನೃತ್ಯವನ್ನು ಮಕ್ಕಳಿಗೆ ಕಲಿಸಿ ಅವರಿಂದ ನೃತ್ಯ ಕಲೆಯ ಪರಂಪರೆಯನ್ನು ಕಾಪಾಡಿದ ನೃತ್ಯ ನಿಕೇತನದ ಪ್ರಾಚಾರ್ಯರು ಮತ್ತು ಸಂಚಾಲಕರಿಗೆ ಅಭಿನಂದನಾರ್ಹರು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಿಳಿಸಿದರು.

ಅವರು, ಬುಧವಾರ ತಡರಾತ್ರಿ ದೊಡ್ಡೇರಿಯ ಕನ್ನೇಶ್ವರ ಆಶ್ರಮದ ಶ್ರೀದತ್ತಾತ್ರೇದಯ ಸನ್ನಿಧಾನದಲ್ಲಿ ಮಹಾಶಿವರಾತ್ರಿ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ನೃತ್ಯ ಮತ್ತು ಸಂಗೀತ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ನೃತ್ಯ ಮತ್ತು ಸಂಗೀತ ಕಲೆಯ ಸೋಬಗನ್ನು ಪ್ರತಿಯೊಬ್ಬರೂ ಆಸ್ವಾದಿಸಬೇಕು. ಮಕ್ಕಳಿಗೆ ನೃತ್ಯ ಮತ್ತು ಸಂಗೀತ ಕಲಿಸುವ ಬಗ್ಗೆ ಎಲ್ಲಾ ಪೋಷಕರು ಚಿಂತನೆ ನಡೆಸಬೇಕೆಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಸಣ್ಣಕೈಗಾರಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ, ನಾಟ್ಯಕಲೆಗೆ ವಿಶೇಷ ಮೌಲ್ಯತಂದುಕೊಟ್ಟ ಕೀರ್ತಿ ನೃತ್ಯನಿಕೇತನಕ್ಕೆಸಲ್ಲುತ್ತದೆ.ಪುಟ್ಟಮಕ್ಕಳಿಂದಹಿಡಿದು ದೊಡ್ಡವರತನಕ ಎಲ್ಲರೂ ಶಾಸ್ತ್ರೀಯಬದ್ಧವಾಗಿ ಈಕಲೆಯನ್ನು ಸಂರಕ್ಷಣೆ ಮಾಡಿಕೊಂಡು ಬಂದಿದ್ದಾರೆ. ನೃತ್ಯ ಮತ್ತು ಸಂಗೀತ ಕಲೆಯನ್ನು ಇನ್ನಷ್ಟು ಮೇಲಕ್ಕೆ ಉಜ್ವಲಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಸಹಕರಿಸಬೇಕೆಂದರು.

ನೃತ್ಯನಿಕೇತನ ಸಂಚಾಲಕ ಯು. ಎಸ್.ವಿಷ್ಣುಮೂರ್ತಿರಾವ್ ಮಾತನಾಡಿ, ಕಳೆದ ಸುಮಾರು 35 ವರ್ಷಗಳಿಂದ ನಾವು ಮಾಡುವ ಎಲ್ಲಾ ಕಾರ್ಯಕ್ರಮಗಳಿಗೆ ಇಲ್ಲಿನ ಜನತೆ ಹೆಚ್ಚು ಪ್ರೋತ್ಸಾಹ ನೀಡುತ್ತಾ ಬಂದಿದ್ದಾರೆ. ಸಚಿವರಾದ ಡಿ.ಸುಧಾಕರ್, ಶಾಸಕ ಟಿ.ರಘುಮೂರ್ತಿ ಸದಾಕಾಲ ನಮ್ಮ ಬೆನ್ನಹಿಂದೆ ಇದ್ದು ಪ್ರೊತ್ಸಾಹ ನೀಡುತ್ತಾ ಬಂದಿದ್ದಾರೆ. ಮುಂದಿನ ದಿನಗಳಲ್ಲೂ ಸಹ ಈ ಸಹಕಾರ ಇದೇರೀತಿ ಮುಂದುವರೆಯಲಿ ಎಂದು ಆಶಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳು ಹಲವಾರು ನೃತ್ಯಗಳನ್ನು ಉತ್ತಮವಾಗಿ ಪ್ರದರ್ಶಿಸಿದರು. ಪ್ರಾಚಾರ್ಯ ಸುಧಾಮೂರ್ತಿ, ಎಂ.ಎನ್. ಮುತ್ಯುಂಜಯ ಉಪಸ್ಥಿತರಿದ್ದರು.

ದೊಡ್ಡೇರಿಯ ಕನ್ನೇಶ್ವರ ಆಶ್ರಮದಲ್ಲಿ ಯಶಸ್ವಿ ಮಹಾಶಿವರಾತ್ರಿ : ಹೆಲಿಕ್ಯಾಪ್ಟರ್ ಮೂಲಕ ಪುಷ್ಪಾರ್ಚನೆ

» ಚಳ್ಳಕೆರೆ

ತಾಲ್ಲೂಕಿನ ದೊಡ್ಡೇರಿಯ ಶ್ರೀಕನ್ನೇಶ್ವರ ಆಶ್ರಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶಿವರಾತ್ರಿಯ ನಂತರ ಶ್ರೀದತ್ತಾತ್ರೇಯಸ್ವಾಮಿಯ ಭವ್ಯವಾದ ರಥೋತ್ಸವ ಸಾವಿರಾರು ಭಕ್ತರ ಜೈಕಾರದೊಂದಿಗೆ ಗುರುವಾರ ಮಧ್ಯಾಹ್ನ ಯಶಸ್ವಿಯಾಗಿ ನಡೆಯಿತು. ರಾಜ್ಯದ ಮೂಲೆ, ಮೂಲೆಯಿಂದ ಭಕ್ತಾಧಿಗಳು ಆಗಮಿಸಿ ಶ್ರೀದತ್ತಾತ್ರೇಯಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿಟ್ಟು ಮಂಗಳವಾದ್ಯಗಳೊಂದಿಗೆ ರಥೋತ್ಸವ ಜರುಗಿತು. ವಿಶೇಷವಾಗಿ ಈ ಬಾರಿ ರಥೋತ್ಸವ ಚಾಲನೆಯಾದ ಸಂದರ್ಭದಲ್ಲಿ ಹೆಲಿಕ್ಯಾಪ್ಟರ್ ಮೂಲಕ ಪುಷ್ಪನಮನ ಸಲ್ಲಿಸಲಾಯಿತು. ಸುಮಾರು ಅರ್ಧಗಂಟೆಗಳ ಕಾಲ ಖಾಸಗಿ ಹೆಲಿಕ್ಯಾಪ್ಟರ್ ಸುಮಾರು 10ಕ್ಕೂ ಹೆಚ್ಚು ಚೀಲಗಳಲ್ಲಿ ತಂದಿದ್ದ ಬಣ್ಣ, ಬಣ್ಣಹೂಗಳನ್ನು ರಥೋತ್ಸವ, ಶಿವನ ಮೂರ್ತಿ, ಗೋಪುರದ ಮೇಲೆ ಹೂ ಚೆಲ್ಲುವ ಮೂಲಕ ಆಗಮಿಸಿದ್ದ ಭಕ್ತರಿಗೆ ಸಂತಸವನ್ನುಂಟು ಮಾಡಿತು. ರಥೋತ್ಸವ ಸಮಯದಲ್ಲಿ ಮಹಿಳೆಯರು ಪೂರ್ಣಕುಂಭ ಸ್ವಾಗತಕೋರಿದರು. ಸಂಸದ ಗೋವಿಂದ ಎಂ.ಕಾರಜೋಳ, ಈ ಬಾರಿ ಮಾತ್ರ ಶಿವರಾತ್ರಿ ಹಬ್ಬದ ಸಂಭ್ರಮದಲ್ಲಿ ಸಾವಿರಾರು ಭಕ್ತರ ಆರಾಧ್ಯ ದೈವವಾದ ಶ್ರೀಸತ್‌ಉಪಾಸಿ ಮಲ್ಲಪ್ಪಸ್ವಾಮೀಜಿಯವರ ಸೇವಾ ಕಾರ್ಯಗಳನ್ನು ಮುಕ್ತಕಂಠದಿಂದ ಹೊಗಳಿದರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ, ದೊಡ್ಡೇರಿಯ ಕನ್ನೇಶ್ವರ ಆಶ್ರಮ ಶ್ರದ್ಧಾಭಕ್ತಿಗಳ ಕೇಂದ್ರವಾಗಿದೆ. ಕಳೆದ ಸುಮಾರು 30 ವರ್ಷಗಳಿಂದ ಶ್ರೀಮಲ್ಲಪ್ಪಸ್ವಾಮೀಜಿಯವರು ಆಧ್ಯಾತ್ಮಿಕ ಚಿಂತನೆಯಲ್ಲಿ ತೊಡಗಿದ್ದಾರೆ. ಮಲ್ಲಪ್ಪಸ್ವಾಮೀಯವರ ಜನಪರ ಕಾಳಜಿ ಪ್ರಶ್ನಾತೀತ ಎಂದರು.

ಪ್ರಮುಖ ಸುದ್ದಿ

ಸಿದ್ದಾರೂಢ ಮಹತ್ತರು ಕೌದಿ ಪೂಜೆ ಪ್ರಾರಂಭ ಮಾಡಿದರು

» ಚಿತ್ರದುರ್ಗ



ಚಿತ್ರದುರ್ಗ ನಗರದ ಕರುವಿನಕಟ್ಟೆವೃತ್ತದಲ್ಲಿನ ಶ್ರೀ ಕಬೀರಾನಂದಾಶ್ರಮದವತಿಯಿಂದ ನಡೆಯುತ್ತಿರುವ ಶಿವರಾತ್ರಿ ಸಪ್ತಾಹದ ಅಂತಿಮ ದಿನವಾದ ಇಂದು ಶಿವಲಿಂಗಾನಂದ ಶ್ರೀಗಳು ಕೌದಿ ವಸ್ತ್ರವನ್ನು ಧರಿಸುವುದರ ಮೂಲಕ ಭಕ್ತಾಧಿಗಳಿಗೆ ದರ್ಶನಾರ್ಶೀವಾದವನ್ನು ನೀಡಿದರು.

ಇಂದು ಸಂಜೆ ಶ್ರೀಮಠದ ಆವರಣದಲ್ಲಿ ಚಿಂದಿ ಬಟ್ಟೆಯಿಂದ ನೇಯ್ಗೆ ಮಾಡಿದ ವಸ್ತ್ರವನ್ನು ಧರಿಸಿ

ಫಾಸ್ಟ್ ನ್ಯೂಸ್

ಬಿಜೆಪಿ ಪ್ರಶ್ನಾತೀತ ನಾಯಕ ಯಡಿಯೂರಪ್ಪ ಹುಟ್ಟುಹಬ್ಬ ಆಚರಣೆ

» ಚಳ್ಳಕೆರೆ

ನಿರಂತರ ಹೋರಾಟಗಳಿಂದಲೇ ಗುರುತಿಸಿಕೊಂಡಿರುವ ಭಾರತೀಯ ಜನತಾಪಕ್ಷದ ಅಗ್ರಗಣ್ಯ ಹಿರಿಯ ನಾಯಕ ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ 82ನೇ ವರ್ಷದ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ನಗರದ ವೀರಭದ್ರಸ್ವಾಮಿ ದೇವಸ್ಥಾನಕ್ಕೆ ತೆರಳಿದ ಪಕ್ಷದ ಕಾರ್ಯಕರ್ತರು ಮುಖಂಡರು ಯಡಿಯೂರಪ್ಪನವರಿಗೆ ಧೀರ್ಘಾಯುಷ್ ಕೋರಿ ಪೂಜೆ ಸಲ್ಲಿಸಿದರು. ಬಿಜೆಪಿ ಜಿಲ್ಲಾಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ಮಾತನಾಡಿ, ಮಾಜಿಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ 82ನೇ ಜನ್ಮದಿನದಂದು ನಾವೆಲ್ಲರೂ ಶ್ರೀವೀರಭದ್ರಸ್ವಾಮಿ ದೇವಸ್ಥಾನದಲ್ಲಿ ಯಡಿಯೂರಪ್ಪನವರ ಹೆಸರಿನಲ್ಲಿ ಅರ್ಚನೆ, ಪೂಜಾ ಕಾರ್ಯಗಳನ್ನು ಕೈಗೊಂಡಿದ್ದೇವೆ. ರಾಜ್ಯದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವನಿಟ್ಟಿನಲ್ಲಿ ಯಡಿಯೂರಪ್ಪನ ನಡೆಸಿದ ಹೋರಾಟವನ್ನು ಯಾರೂ ಮರೆಯಲಾರರು ಎಂದರು. ಮಂಡಲಾಧ್ಯಕ್ಷ ಸುರೇಶ್, ಜಿಲ್ಲಾ ನಿಕಟಪೂರ್ವಪ್ರಧಾನ ಕಾರ್ಯದರ್ಶಿ ಜಯಪಾಲಯ್ಯ, ಬಿ.ಎಸ್.ಶಿವಪುತ್ರಪ್ಪ, ದಿನೇಶ್‌ರೆಡ್ಡಿ, ಕರೀಕೆರೆತಿಪ್ಪೇಸ್ವಾಮಿ, ಚಿದಾನಂದ, ಹೊನ್ನೂರಪ್ಪ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ದ್ವಿತೀಯ ರ್‍ಯಾಂಕ್ ಪಡೆದ ವಿದ್ಯಾರ್ಥಿನಿಗೆ ಅಭಿನಂದನೆ

» ಚಳ್ಳಕೆರೆ

ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಸಮಾಜಶಾಸ್ತ್ರ ವಿಭಾಗದ ವಿದ್ಯಾರ್ಥಿ ಟಿ.ಭಾನುಪ್ರಿಯ ದಾವಣಗೆರೆ ವಿಶ್ವವಿದ್ಯಾಲಯ ಮಟ್ಟದಲ್ಲಿ ಎರಡನೇ ರ್‍ಯಾಂಕ್ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿತಂದಿದ್ದಾಳೆಂದು ಪ್ರಾಚಾರ್ಯ ಎಸ್. ಮಂಜುನಾಥ ತಿಳಿಸಿದ್ದಾರೆ.

ಅವರು ಈ ಬಗ್ಗೆ ಮಾಹಿತಿ ನೀಡಿ 2023–24ನೇ ಸಾಲಿನಲ್ಲಿ ನಡೆದ ಪರೀಕ್ಷೆಯಲ್ಲಿ ಕಾಲೇಜಿನ ಟಿ.ಭಾನುಪ್ರಿಯಾ 2450ಕ್ಕೆ 1909(ನಾಲ್ಕು ಸೆಮಿಸ್ಟರ್) ಅಂಕ ಪಡೆಯುವ ಮೂಲಕ ಸ್ನಾತಕೋತ್ತರ ಸಮಾಜಶಾಸ್ತ್ರ ವಿಭಾಗದಲ್ಲಿ ವಿಶ್ವವಿದ್ಯಾಲಯ ಎರಡನೇ ರ್‍ಯಾಂಕ್‌ಗೌರವಕ್ಕೆ ಪಾತ್ರರಾಗಿದ್ದಾರೆ. ವಿದ್ಯಾರ್ಥಿಯ ಸಾಧನೆಗೆ ಪ್ರಾಚಾರ್ಯರೂ ಸೇರಿದಂತೆ ಎಲ್ಲರೂ ಅಭಿನಂದಿಸಿದ್ದಾರೆ.

ರ್‍ಯಾಂಕ್ ವಿಜೇತೆ ಟಿ.ಭಾನುಪ್ರಿಯಾ ಪತ್ರಿಕೆಯೊಂದಿಗೆ ಮಾತನಾಡಿ, ಸ್ನಾತಕೋತ್ತರ ವಿಭಾಗದ ಮುಖ್ಯಸ್ಥ ಪ್ರೊ.ಕೆ.ಎಂ.ದೇವಪ್ಪರವರ ಮಾರ್ಗದರ್ಶನದಲ್ಲಿ, ಪ್ರಾಧ್ಯಾಕರು ಸೂಚಿಸಿದಂತೆ ನಾನು ವಿದ್ಯಾಭ್ಯಾಸ ಮಾಡುತ್ತಾ ಬಂದಿದ್ದೇನೆ. ಪ್ರತಿಯೊಂದು ಹಂತದಲ್ಲೂ ನನಗೆ ಈ ಕಾಲೇಜಿನ ಗ್ರಂಥಾಲಯದಲ್ಲಿ ಅಭ್ಯಾಸ ಮಾಡಲು ಉತ್ತಮ ಪುಸ್ತುಕಗಳು ಸಿಕ್ಕಿವೆ ಮತ್ತು ಪ್ರಾಧ್ಯಾಪಕರು ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ಎರಡನೇ ರ್‍ಯಾಂಕ್ ಪಡೆದಿದ್ದು ಸಂತೋಷ ಉಂಟು ಮಾಡಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಗಮನವನ್ನು ಶಿಕ್ಷಣಕ್ಕೆ ನೀಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ನಾಗಶ್ರೀ, ಡಾ.ಕೆ.ಚಿತ್ತಯ್ಯ, ಗ್ರಂಥಪಾಲಕ ಎಸ್.ಪಾಪಣ್ಣ, ಉಪನ್ಯಾಸಕ ರವಿಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ಬಿಜೆಪಿ ಪಕ್ಷದಲ್ಲಿ ಏಕೈಕ ಸಮುದಾಯಕ್ಕೆ ಮನ್ನಣೆ, ಇತರೆ ವರ್ಗಕ್ಕೆ ನಿರ್ಲಕ್ಷ್ಯ: ಅತಿಥ್ ಅಂಬರ್‌ಕರ್

» ದಾವಣಗೆರೆ

ಸದಾ ರಾಷ್ಟ್ರೀಯವಾದದ ಬಗ್ಗೆ ಮಾತನಾಡುವ ಬಿಜೆಪಿ ಪಕ್ಷವು ಕೇವಲ ಏಕೈಕ ಸಮುದಾಯದ ಸಮಾವೇಶ, ಪ್ರಮುಖರ ಸಭೆಗಳನ್ನು ಮಾಡುತ್ತಿದ್ದು, ಪಕ್ಷದಲ್ಲಿ ಕೇವಲ ಏಕೈಕ ಸಮುದಾಯಕ್ಕೆ ಮನ್ನಣೆ ನೀಡಲಾಗುತ್ತಿದ್ದು, ಪಕ್ಷಕ್ಕಾಗಿ ದುಡಿದ ಇತರೆ ಸಮುದಾಯಗಳನ್ನು ನಿರ್ಲಕ್ಷ ಮಾಡಲಾಗುತ್ತಿದೆ. ಇದರಿಂದಾಗಿ ಆಯಾ ಸಮುದಾಯಗಳ ಮುಖಂಡರು, ಕಾರ್ಯಕರ್ತರು ಪಕ್ಷದಿಂದ ದೂರ ಉಳಿಯುವ ಮಾತುಗಳನ್ನು ಆಡುತ್ತಿದ್ದಾರೆ ಎಂದು ಬಿಜೆಪಿಯ ದಾವಣಗೆರೆ ಜಿಲ್ಲಾ ಉಪಾಧ್ಯಕ್ಷ ಅತಿಥ್ ಅಂಬರ್‌ಕರ್ ಕಳವಳ ವ್ಯಕ್ತ ಪಡಿಸಿದ್ದಾರೆ.ಸದಾ ರಾಷ್ಟ್ರೀಯತೆ, ಜಾತ್ಯಾತೀತೆ ಬಗ್ಗೆ ಮಾತನಾಡುವ ಪಕ್ಷ ಈ ರೀತಿ ಒಂದೇ ಸಮುದಾಯಕ್ಕೆ ಮಣೆ ಹಾಕುವುದು ಸರಿಯಲ್ಲ. ದುರಾದೃಷ್ಟ ಎಂದರೆ ಅಧಿಕಾರ ಅನುಭವಿಸಿದ ಸಮುದಾಯಗಳೇ ಮತ್ತೆ ಅಧಿಕಾರಕ್ಕಾಗಿ ಸಭೆ,ಸಮಾರಂಭ ನಡೆಸುತ್ತಿದ್ದಾರೆ.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಪೂರ್ವಭಾವಿ ಸಭೆ

ಪರೀಕ್ಷಾ ಪಾವಿತ್ರ್ಯತೆ ಕಾಪಾಡಲು ಡಿಸಿ ಸೂಚನೆ

» ದಾವಣಗೆರೆ

ಪರೀಕ್ಷೆ ನಡೆಸುವುದು ಒಂದು ಪವಿತ್ರ ಕೆಲಸವಾಗಿದ್ದು, ಯಾವುದೇ ರೀತಿಯ ಅಕ್ರಮಕ್ಕೆ ಎಡೆ ಮಾಡದಂತೆ ಶಾಂತಿಯುತವಾಗಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಗುರುವಾರ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜೀವನದಲ್ಲಿ ಎಲ್ಲರಿಗೂ ಶಿಕ್ಷಣ ಅತಿ ಮುಖ್ಯ. ಪೋಷಕರು ಅದನ್ನು ಗಮನದಲ್ಲಿಟ್ಟುಕೊಳ್ಳಬೇಕು. ನಿಮ್ಮ ಮಕ್ಕಳು ಮುಂದಿನ ದಿನಗಳಲ್ಲಿ ಉನ್ನತ ಮಟ್ಟಕ್ಕೆ ಏರಬೇಕಾದರೆ ಶಿಕ್ಷಣ ಮಾನದಂಡವಾಗಿರುತ್ತದೆ. ಪೋಷಕರು ಮಕ್ಕಳನ್ನು ಶಾಲೆಯಿಂದ ಬಿಡಿಸುವ ಆಲೋಚನೆಯನ್ನು ತೆಗೆದು ಹಾಕಬೇಕು. ಮಕ್ಕಳಿಗೆ ಸದಾ ಪ್ರೋತ್ಸಾಹಿಸುತ್ತಾ ಅವರ ಸಾಧನೆಗೆ ಬೆನ್ನು ತಟ್ಟಬೇಕು ಎಂದರು. ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಿ ಉತ್ತಮ ಫಲಿತಾಂಶ ಪಡೆಯುವಂತೆ ಶಿಕ್ಷಕರು ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವ ಸವಾಲಿನ ಸಮಯ ಇದಾಗಿರುತ್ತದೆ.

ಪರೀಕ್ಷಾ ಕೊಠಡಿಯಲ್ಲಿ ಯಾವುದೇ ಅವಘಾಡವಾಗದಂತೆ ನೋಡಿಕೊಳ್ಳಬೇಕು. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಇನ್ನೂ 28 ದಿನ ಬಾಕಿ ಇದೆ. ಮಾರ್ಚ್ 21 ರಿಂದ ಏಪ್ರಿಲ್ 04 ಪರೀಕ್ಷೆಗಳು ನಡೆಯಲಿವೆ. ಈ ಬಾರಿ ಕಟ್ಟನಿಟ್ಟಾಗಿ ಪರೀಕ್ಷೆ ನಡೆಯಲಿದ್ದು, ಕಾಪಿ ಮಾಡಲು ಯಾವುದೇ ರೀತಿಯ ಅವಕಾಶ ಇರುವುದಿಲ್ಲ. ವಿದ್ಯಾರ್ಥಿಗಳು ಪರಿಶ್ರಮದಿಂದ ಪರೀಕ್ಷೆಯನ್ನು ಎದುರಿಸಲು ಸಿದ್ದರಾಗಬೇಕು. ಅಂಕಗಳ ಬೆನ್ನತ್ತುವುದರೊಂದಿಗೆ ಕ್ರಿಯಾಶೀಲತೆ ಕಳೆದುಕೊಳ್ಳುವುದು ಬೇಡ, ಪರ್ಯಾಯ ಮಾರ್ಗದಲ್ಲಿ ಪರೀಕ್ಷೆ ಪಾಸು ಮಾಡಲು ಹೋದರೆ ಜೀವನದಲ್ಲಿ ಫೇಲ್ ಆಗುತ್ತೀರಿ, ಆತ್ಮಸ್ಥೈರ್ಯದಿಂದ ಮಕ್ಕಳು ಪರೀಕ್ಷೆ ಬರೆಯುವಂತೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಕಿವಿಮಾತು ಹೇಳಿದರು. ಪರೀಕ್ಷಾ ಸಿಬ್ಬಂದಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಅಂಕಗಳಿಗಿಂತ ಗುಣಮಟ್ಟದ ಫಲಿತಾಂಶಕ್ಕೆ ಶ್ರಮಿಸಬೇಕು. ಹಿಜಾಬ್ ಸಂಬಂಧ ಸರ್ಕಾರದ ಸುತ್ತೋಲೇಯನ್ನು ಅನುಸರಿಸಬೇಕು. ಪ್ರತಿ ಶಾಲೆಯಲ್ಲೂ ಸಿಸಿ ಕ್ಯಾಮಾರಾ ಅಳವಡಿಸಬೇಕು. ಸಿಬ್ಬಂದಿಗಳು ಕೂಡ ಪರೀಕ್ಷಾ ಕೊಠಡಿಗಳಿಗೆ ಮೊಬೈಲ್ ತೆಗೆದುಕೊಂಡು ಹೋಗುವ ಆಗಿಲ್ಲ. ಕೊಠಡಿಗಳಲ್ಲಿ ಗಡಿಯಾರಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು. ಒಳಗಡೆ ಕಾಣುವಂತ ನೀರಿನ ಬಾಟಲ್‌ಗಳನ್ನು ತೆಗೆದುಕೊಂಡು ಬರಲು ಮಾತ್ರಅವಕಾಶಕೊಡಬೇಕು.ಕೊಠಡಿಯಲ್ಲಿ ನೀರು, ಬೆಳಕಿನ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು ಎಂದರು.

ಪರೀಕ್ಷೆ ಜಿಲ್ಲೆಯ 22579 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಅತಿಯಾದ ಆತ್ಮವಿಶ್ವಾಸಬೇಡ,ಪರೀಕ್ಷೆಗಳಆರಂಭದಿಂದ ಅಂತ್ಯದವರೆಗೂ ಎಲ್ಲಾ ಅಧಿಕಾರಿಗಳು ಎಚ್ಚರ ವಹಿಸಬೇಕು. ಈ ಹಿಂದಿನ ಎಲ್ಲಾ ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ನಡೆಸಿದ ಹೆಗ್ಗಳಿಕೆ ನಮ್ಮ ಜಿಲ್ಲೆಗಿದೆ. ಸರ್ಕಾರ ನೀಡುವ ಎಲ್ಲಾ ಆದೇಶಗಳನ್ನು ಪರಿಪಾಲನೆ ಮಾಡುವ ಮೂಲಕ ಪರೀಕ್ಷೆ ಸುವ್ಯವಸ್ಥೆ ನಡೆಯುವಂತೆ ನೋಡಿಕೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಪರೀಕ್ಷೆಯಲ್ಲಿ ಹಲವಾರು ಮಾರ್ಪಾಡುಗಳಾಗುತಿದ್ದು ನಿಯಮಗಳನ್ನು ಸರಿಯಾಗಿ ಪಾಲಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

ಪರೀಕ್ಷೆ ನಡೆಯುವ ಪರೀಕ್ಷಾ ಕೇಂದ್ರಗಳಲ್ಲಿ ಕಲಂ 144 ರನ್ವಯ ನಿಷೇಧಾಜ್ಞೆ ಘೋಷಣೆ ಜಾರಿ ಮಾಡಲಾಗುವುದು. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ಅಂತರದಲ್ಲಿರುವ ಝೆರಾಕ್ಸ್ ಅಂಗಡಿಗಳನ್ನು ತೆರಯುವಂತಿಲ್ಲ. ಜಿಲ್ಲಾ ಹಂತದಲ್ಲಿ ಜಾಗೃತ ದಳದ ಅಧಿಕಾರಿಗಳನ್ನು ನೇಮಕ ಮಾಡಿ, ಪರೀಕ್ಷಾ ಕೇಂದ್ರಗಳ ಸುತ್ತಲೂ ಪೊಲೀಸರನ್ನು ನೇಮಕಗೊಳಿಸಲಾಗುತ್ತದೆ ಎಂದು ಅವರು ಹೇಳಿದರು. ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸಂದೇಶ, ಮಾಹಿತಿಗಳನ್ನು ಯಾರೂ ಕೂಡ ಪ್ರಕಟಿಸಬಾರದು. ಒಂದು ವೇಳೆ ಪ್ರಕಟಿಸಿದರೆ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ. ಸಾಮಾಜಿಕ ಜಾಲತಾಣಗಳ ಮೇಲೆ ಸೈಬರ್ ಪೊಲೀಸರು ನಿಗಾ ವಹಿಸಲಿದ್ದಾರೆ ಎಂದರು.

ಡಿ.ಡಿಪಿ.ಐ ಕೊಟ್ರೇಶ್ ಮಾತನಾಡಿ, ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಒಟ್ಟು 22579 ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲಿದ್ದು, ಒಟ್ಟು 81 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಲ್ಲಿ ಉತ್ತಮವಾಗಿ ಪರೀಕ್ಷೆ ನಡೆಯಲು ಜಿಲ್ಲಾಧಿಕಾರಿಗಳ ಮಾರ್ಗದರ್ಶನದಂತೆ ಎಲ್ಲಾ ಮುಂಜಾಗೃತ ಕ್ರಮ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು. ಜಿ.ಪಂ ಉಪಕಾರ್ಯದರ್ಶಿ ಕೃಷ್ಣನಾಯ್ಕ, ಡಯಟ್ ಪ್ರಾಂಶುಪಾಲರಾದ ಗೀತಾ, ಡಿಡಿಪಿಯು ಕರಿಬಸಪ್ಪ ಸೇರಿದಂತೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಬಿಜೆಪಿಯಿಂದ ಬಿಎಸ್‌ವೈ ಹುಟ್ಟುಹಬ್ಬ ಆಚರಣೆ

» ಚಿತ್ರದುರ್ಗ

ಬಿಜೆಪಿ ನಾಯಕ, ಮಾಜಿ ಮುಖ್ಯಮಂತ್ರಿ ಹುಟ್ಟು ಹೋರಾಟಗಾರರು ಅಭೀವೃದ್ಧಿಯ ಹರಿಕಾರರಾದ ಬಿ.ಎಸ್.ಯಡೆಯೂರಪ್ಪರವರ 82ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ ಚಿತ್ರದುರ್ಗ ಜಿಲ್ಲಾ ಬಿಜೆಪಿ ಘಟಕದವತಿಯಿಂದ ನಗರದ ಅನೆಬಾಗಿಲ ಬಳಿಯಲ್ಲಿನ ಶ್ರೀ ಪ್ರಸನ್ನ ಸೇವಾ ಗಣಪತಿ ದೇವಸ್ಥಾನದಲ್ಲಿ ವಿನಾಯಕನಿಗೆ ಪೂಜೆಯನ್ನು ಸಲ್ಲಿಸುವುದರ ಮೂಲಕ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ಯಡೆಯೂರಪ್ಪರವರು ಕರ್ನಾಟಕದಲ್ಲಿ ಬಿಜೆಪಿಯನ್ನು ಕಟ್ಟುವುದರಲ್ಲಿ ತಮ್ಮನ್ನು ತಾವು ಅರ್ಪಿಸಿಕೊಂಡಿದ್ದಾರೆ. ಇದರಿಂದ ರಾಜ್ಯದಲ್ಲಿ ಬಿಜೆಪಿ ಇಷ್ಟರ ಮಟ್ಟಿಗೆ ಬೆಳೆಯಲು ಸಾಧ್ಯವಾಗಿದೆ. ಬಿಜೆಪಿಯನ್ನು ಗ್ರಾಮ ಮಟ್ಟಕ್ಕೆ ತೆಗೆದುಕೊಂಡು ಹೋಗಿ ಅಲ್ಲಿ ಅದು ನೆಲೆ ನಿಲ್ಲುವಂತೆ ಮಾಡಿದ್ದಾರೆ. ರೈತರ ಪರವಾದ ಹೋರಾಟವನ್ನು ಮಾಡುವುದರ ಮೂಲಕ ರೈತ ನಾಯಕನಾಗಿದ್ದಾರೆ. ನಾಡಿನ ಜನತೆಗೆ ಅಭಿವೃದ್ಧಿಯ ಮಹಾ ಪೂರವನ್ನು ಹರಿಸಿದ್ದಾರೆ. ಭಗವಂತ ಅವರಿಗೆ ಆರೋಗ್ಯ ಹಾಗೂ ಆಯಸ್ಸನ್ನು ನೀಡಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಲಾಯಿತು.

ಯಡೆಯೂರಪ್ಪರವರು ಸುಮಾರು 45 ವರ್ಷಗಳ ಕಾಲ ಸಕ್ರಿಯವಾಗಿ ರಾಜಕಾರಣದಲ್ಲಿ ಇದ್ದರು. ಬಿಜೆಪಿಯನ್ನು ಮಧ್ಯ ಕರ್ನಾಟಕದಲ್ಲಿ ಕಟ್ಟಿ ಬೆಳಸಿ ಸರ್ಕಾರ ಬರುವ ರೀತಿಯಲ್ಲಿ ಹೋರಾಟವನ್ನು ಮಾಡಿದರು. ದೀನ ದಲಿತ ಹಿಂದುಳಿದ ವರ್ಗ ಸರ್ವ ಜನಾಂಗಕ್ಕೂ ಸಹಾ ಅಭೀವೃದ್ಧಿಯನ್ನು ತೋರಿಸಿದವರು ಪ್ರತಿ ಸಮುದಾಯಕ್ಕೂ ಸಹಾ ಪ್ರಾತಿನಿತ್ಯವನ್ನು ನೀಡುವುದರ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವಂತ ಕಾರ್ಯವನ್ನು ಮಾಡಿದರು.

ತಮ್ಮ ಅಧಿಕಾರದ ಅವಧಿಯಲ್ಲಿ ಜನತೆಗೆ ವಿವಿಧ ರೀತಿಯ ಯೋಜನೆಗಳನ್ನು ಜಾರಿ ಮಾಡುವುದರ ಮೂಲಕ ಜನನಾಯಕರಾಗಿದ್ದಾರೆ. ಹೆಣ್ಣು ಮಕ್ಕಳು ಜನಿಸಿದರೆ ಆವರು ಬೇರೆಯವರಿಗೆ ಹೊರೆಯಾಗಬಾರದೆಂದು ಭಾಗ್ಯಲಕ್ಷ್ಮಿ ಯೋಜನೆ ಜಾರಿ ಮಾಡಿದರು. ಇದೇ ರೀತಿ ಮಕ್ಕಳು ಅರ್ಧದಲ್ಲಿ ಶಿಕ್ಷಣವನ್ನು ಬಿಡಬಾರದೆಂದು ಅವರಿಗೆ ಉಚಿತವಾಗಿ ಸೈಕಲ್ ವಿತರಣೆ ಮಾಡುವುದರ ಮೂಲಕ ಅವರ ವಿದ್ಯಾಭ್ಯಾಸವನ್ನು ಮುಂದುವರೆಸಲು ಅವಕಾಶ ಕಲ್ಪಿಸಿದರು. ರೈತ ಸಂಕಷ್ಟ ಕಾಲದಲ್ಲಿ ಇದ್ದಾರೆ ಎಂದು ತಿಳಿದು ಅವರ ಸಮಸ್ಯೆಗೆ ಸ್ಪಂದಿಸಬೇಕೆಂದು ಕಿಸಾನ್ ಸಮ್ಮಾನ್ ನಿಧಿಯನ್ನು ಜಾರಿ ಮಾಡಿದರು. ರೈತ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವಂತೆ ವಿದ್ಯಾರ್ಥಿ ವೇತನವನ್ನು ನೀಡಿ ಅವರನ್ನು ಅಕ್ಷರವಂತರನ್ನಾಗಿ ಮಾಡಿದರು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಖಂಜಾಚಿ ಮಾಧುರೀ ಗೀರೀಶ್, ಮಾಧ್ಯಮ ವಕ್ತಾರರಾದ ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ, ಶಂಭು, ಕವನ ಅರುಣಕುಮಾರಿ, ಯಶವಂತ, ವಿರೇಶ್ ಜಾಲಿಕಟ್ಟೆ, ರವಿ, ಶಿವಣ್ಣಚಾರ್, ಉಪಾಧ್ಯಕ್ಷರಾದ ರಾಜಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಇಮ್ಮಡಿ ಶ್ರೀ ಆರ್ಥಿಕ ನೆರವು

» ಚಿತ್ರದುರ್ಗ

ಗೂಡುರೂ ಗ್ರಾಮದಲ್ಲಿ ನಡೆದ ಲವ್ ಜೀಹಾದ್ ಕೃತ್ಯ ನಡೆಸಿದ ಕಾರಣ ಯುವತಿಯ ಜೀವನ್ಮರಣ ಹೋರಾಟದಲ್ಲಿ ವೈದ್ಯಕೀಯ ಚಿಕಿತ್ಸೆ ಅತ್ಯತ್ಯವಾಗಿ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಅವರು ಯುವತಿಯ ಚಿಕಿತ್ಸೆಯ ವೆಚ್ಚಕ್ಕೆ 1.00.000ಢಿ (ಒಂದು ಲಕ್ಷ)ರೂಪಾಯಿಗಳನ್ನು ನೀಡಿದ್ದಾರೆ.ಬಾಗಲಕೋಟ ಜಿಲ್ಲಾ ಹುನಗುಂದ ತಾಲ್ಲೂಕು ಗೂಡುರೂ ಗ್ರಾಮದ 22 ವರ್ಷದ ನೇತ್ರಾವತಿ ವಿ ಗೂಡೂರು ಎಂಬ ಯುವತಿಯ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಲವ್ ಜೀಹಾದ್ ಕೃತ್ಯ ನಡೆಸಿದ ಕಾರಣ ಯುವತಿಯ ಜೀವನ್ಮರಣ ಹೋರಾಟದಲ್ಲಿ ವೈದ್ಯಕೀಯ ಚಿಕಿತ್ಸೆ ಅತ್ಯಗತ್ಯ. ಯುವತಿಗೆ ಮಾತಾ–ಪಿತಾರಿಲ್ಲದ ಕಾರಣ ತಗಡಿನ ಗುಡಿಸಲು ವಾಸಿಯಾಗಿರುವ ಬಡಕುಟುಂಬದ ಹಿನ್ನೆಲೆಯನ್ನು ಅರಿತ ಅಶೋಕ ಲಿಂಬಾವಳಿ ಅವರು ಭೋವಿ ಗುರುಪೀಠದ ಜಗದ್ಗುರುಗಳಿಗೆ ವಿಷಯದ ಚಿಂತನ ಮಂಥನ ಮಾಡಿದ ಫಲಶೃತಿಯಂತೆ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಅವರು ಯುವತಿಯ ಚಿಕಿತ್ಸೆಯ ವೆಚ್ಚಕ್ಕೆ 1.00.000ಢಿ (ಒಂದು ಲಕ್ಷ)ರೂಪಾಯಿಗಳನ್ನು ನೀಡಿದ್ದಾರೆ.

ತಾತ್ಕಾಲಿಕ ಆಶ್ರಯ ನೀಡಿದ ಇಳಕಲ್ ಮಹಿಳಾ ಸಾಂತ್ವನ ಕೇಂದ್ರಕ್ಕೆ ತೆರಳಿ, ಚೆಕ್ ಹಸ್ತಾಂತರಿಸುವ ಸಂದರ್ಭದಲ್ಲಿ ತಂಗಡಗಿಯ ಹಡಪದ ಅಪ್ಪಣ್ಣ ಗುರುಪೀಠದ ಜಗದ್ಗುರು ಅನ್ನದಾನ ಭಾರತಿ ಅಪ್ಪಣ್ಣ ಮಹಾಸ್ವಾಮಿಗಳು, ತೆಲಸಂಗ ಕುಂಬಾರ ಗುರುಪೀಠದ ಜಗದ್ಗುರು ಕುಂಬಾರ ಗುಂಡಯ್ಯ ಮಹಾಸ್ವಾಮಿಗಳು, ಶಿಕಾರಿಪುರ ವಿರಕ್ತಮಠ ಶ್ರೀ ಚನ್ನಬಸವ ಮಹಾಸ್ವಾಮಿಗಳು, ಭಾರತೀಯ ರೈಲ್ವೆ ಪ್ರಾಧಿಕಾರದ ಸದಸ್ಯ ಅಶೋಕ

ಫಾಸ್ಟ್ ನ್ಯೂಸ್

ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ತೋಟಗಾರಿಕೆ ಇಲಾಖೆ ವ್ಯಾಪ್ತಿಯ ಹಿರೇಗುಂಟನೂರು ಹೋಬಳಿಯ ಐಯ್ಯನಹಳ್ಳಿ ಗ್ರಾಮದಲ್ಲಿನ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಏಪ್ರಿಲ್ 01 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಐಯ್ಯನಹಳ್ಳಿ ಗ್ರಾಮದಲ್ಲಿನ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿನಲ್ಲಿ 2025ರ ಮೇ 02 ರಿಂದ 2026ರ ಫೆ.28 ರ ಅವಧಿಯವರೆಗೆ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.ತರಬೇತಿ ಅರ್ಜಿಗಳನ್ನು ಮಾರ್ಚ್ 01 ರಿಂದ 31 ರವರೆಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯಲ್ಲಿ ಅಥವಾ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in ನಲ್ಲಿ ಅಥವಾ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಆಯ್ಕೆಯಾದ ಶಿಬಿರಾರ್ಥಿಗಳಿಗೆ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ವಸತಿ ಸಹಿತ ತರಬೇತಿ ನೀಡಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಆಯ್ಕೆಗೊಂಡಲ್ಲಿ ಈ ಅಭ್ಯರ್ಥಿಗಳಿಗೆ ಉಚಿತವಾಗಿ ಕಲಿಕೆಯ ಎಲ್ಲಾ ತರಹದ ಅವಕಾಶಗಳನ್ನು ಕಲ್ಪಿಸಲಾಗುವುದು. ಆದರೆ ವಸತಿ ನಿಲಯದಲ್ಲಿ ವಾಸ್ತವ್ಯದ ವ್ಯವಸ್ಥೆ ಕಡ್ಡಾಯ ಇರುವುದಿಲ್ಲ ಹಾಗೂ ಶಿಷ್ಯವೇತನಕ್ಕೆ ಅವಕಾಶವಿರುವುದಿಲ್ಲ. ತರಬೇತಿಗೆ ಒಟ್ಟು 15 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆಸರ್ಕಾರದಮೀಸಲಾತಿನಿಯಮಗಳನುಸಾರ ಆಯ್ಕೆ ಮಾಡಲಾಗುತ್ತದೆ. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣವಾಗಿರಬೇಕು. ತರಬೇತಿ ಬಯಸುವ ಅಭ್ಯರ್ಥಿಯ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಜಮೀನನ್ನು ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರ ತರಬೇತಿಯನ್ನು ಪಡೆಯಲು ಇಚ್ಛಿಸಿದ್ದಲ್ಲಿ ಡಿಸ್‌ಚಾರ್ಜ್ ಬುಕ್, ಪರ್ಸನಲ್ ಪೆನ್ಶನ್ ಆರ್ಡರ್ ಕಾಪಿ, ಎಕ್ಸ್ ಸರ್ವಿಸ್ ಮ್ಯಾನ್ ಐಡಿ ಕಾರ್ಡ್ ಕಾಪಿ, ಇತ್ಯಾದಿಗಳನ್ನ ಸಲ್ಲಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಹಾಗೂ ಅಂಗವಿಕಲದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ ವಯಸ್ಸಿನವರಾಗಿರಬೇಕು. ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷ, ಮಾಜಿ ಸೈನಿಕರಿಗೆ 33 ರಿಂದ 65 ವರ್ಷ ವಯಸ್ಸಿನವರಾಗಿರಬೇಕು. ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.1,750/–ಗಳ ಮಾಸಿಕ ಶಿಷ್ಯವೇತನ ನೀಡಲಾಗುವುದು. ಸಾಮ್ಯಾನ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.30, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅಂಗವಿಕಲ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.15 ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ (ಆಆ) ಮೂಲಕ ಆಜಠಿಣಣಥಿ ಆಡಿಜಭಿಣಠಡಿ ಠಜಿ ಊಠಡಿಣಭಿಣಟಣಣಡಿಜ (ಚಕ) ಋಣಡಿಚಿಜಣಡಿರಚಿ ಹೆಸರಿನಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಚಿತ್ರದುರ್ಗ ಕಚೇರಿಗೆ ಏಪ್ರಿಲ್ 01ರ ಸಂಜೆ 5.30 ರೊಳಗೆ ಅರ್ಜಿ ಸಲ್ಲಿಸಬೇಕು. ಏಪ್ರಿಲ್ 08 ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ತೋಟಗಾರಿಗೆ ಉಪ ನಿರ್ದೇಶಕರರ ಕಚೇರಿಯಲ್ಲಿ ಸಂದರ್ಶವನ್ನು ನೆಡೆಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 08194–230895, 9980991048 ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ವಿನೂತನವಾಗಿ ಹುಟ್ಟು ಹಬ್ಬ ಅಚರಣೆ ಮಾಡಿಕೊಂಡ ಬಿಜೆಪಿ ಮುಖಂಡ

» ಹೊಸದುರ್ಗ

ಬಿಜೆಪಿ ಯುವ ಮುಖಂಡ ಶಿವು ಮಠ ಎಂಬುವರು ಈ ಬಾರಿ ಶಿವರಾತ್ರಿ ಹಬ್ಬದ ದಿನದಂದು ತಮ್ಮ ಹುಟ್ಟು ಹಬ್ಬದ ದಿನ ಬಂದ ಹಿನ್ನಲೆಯಲ್ಲಿ ಕುಟುಂಬ ಸಮೇತ ಪಟ್ಟಣದ ಕೋಟೆ ಪ್ರದೆಶದಲ್ಲಿರುವ ವೃದ್ಧಾಶ್ರಮಕ್ಕೆ ತೆರಳಿ ಅಲ್ಲಿನ ಹಿರಿಯರಿಗೆ ಬಟ್ಟೆ ಸೇರಿದಂತೆ ಒಂದು ವರ್ಷದ ಊಟದ ವ್ಯವಸ್ಥೆಯನ್ನು ಕಲ್ಪಿಸಿ ತಮ್ಮ ಹುಟ್ಟು ಹಬ್ಬದ ಆಚರಣೆ ಮಾಡಿಕೊಂಡಿದ್ದಾರೆ.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ

ಟಿಬಿ ಮುಕ್ತ ಪ್ರಚಾರಾಂದೋಲನಕ್ಕೆ ಕೈಜೋಡಿಸಿ

» ಚಿತ್ರದುರ್ಗ

100 ದಿನ ಟಿಬಿ ಮುಕ್ತ ತೀವ್ರ ಪ್ರಚಾರಾಂದೋಲನ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರ ಸಭಾಂಗಣದಲ್ಲಿ ಗುರುವಾರ ಆರೋಗ್ಯ ಇಲಾಖೆ, ಜಾನ್‌ಮೈನ್ಸ್ ಅವರ ಸಹಯೋಗದಲ್ಲಿ 100 ದಿನ ಟಿಬಿ ಮುಕ್ತ ತೀವ್ರ ಪ್ರಚಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

100 ದಿನಗಳ ಟಿಬಿ ಮುಕ್ತ ತೀವ್ರ ಪ್ರಚಾರ ಆಂದೋಲನ ಕಾರ್ಯಕ್ರಮವು ಇಂದಿಗೆ 87 ದಿನಗಳ ಯಶಸ್ವಿ ಪ್ರಯಾಣ ಬೆಳೆಸಿದೆ. ನಿಮ್ಮೆಲ್ಲರ ಸಹಕಾರ ಸಹಯೋಗದೊಂದಿಗೆ 12 ಹೊಸ ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ. ಪ್ರಧಾನಮಂತ್ರಿಗಳ ನಿಕ್ಷಯ ಮಿತ್ರ ಕಾರ್ಯಕ್ರಮ ಯೋಜನೆಯಲ್ಲಿ ಜಾನ್ ಮೈನ್ಸ್ ಕಂಪನಿಯವರು ಭಾಗಿದಾರರಾಗಿ ಸಮುದಾಯ ಆರೋಗ್ಯ ಕೇಂದ್ರ ಸಿರಿಗೆರೆ ಸುತ್ತಮುತ್ತ ಹೊಂದಿಕೊಂಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಕ್ಯಾಸಪುರ, ವಿಜಾಪುರ, ಹಿರೇಗುಂಟನೂರು, ಭೀಮಸಮುದ್ರ ವ್ಯಾಪ್ತಿಯ ಒಟ್ಟು 35 ಟಿಬಿ ಪ್ರಕರಣಗಳಿಗೆ ಪೌಷ್ಟಿಕ ಪೋಷಕ ಆಹಾರದ ಕಿಟ್‌ಗಳನ್ನು ಆರು ತಿಂಗಳ ಕಾಲ ನೀಡುತ್ತಿರುವುದು ಪ್ರಶಂಸನೀಯ ಎಂದರು.

ಶೀಘ್ರವಾಗಿ ಕ್ಷಯ ರೋಗ ಪ್ರಕರಣ ಪತ್ತೆ ಹಚ್ಚುವುದು, ಚಿಕಿತ್ಸೆ ದೊರಕಿಸುವುದು ಗುಣಮುಕ್ತರನ್ನಾಗಿ ಮಾಡುವುದು, ಹೊಸ ಪ್ರಕರಣಗಳ ಸಂಖ್ಯೆ ಕಡಿಮೆ ಮಾಡುವುದು, ಮರಣ ಪ್ರಮಾಣದರ ಕಡಿಮೆ ಮಾಡುವುದು, ಕ್ಷಯರೋಗದ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶ ಎಂದರದು.ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಕ್ಷಯರೋಗದ ಬಗ್ಗೆ ಇರುವ ಸಾಮಾಜಿಕ ಕಳಂಕ ತಡೆಯಬೇಕು. ಸಮಾಜದಲ್ಲಿ ಮತ್ತು ಕುಟುಂಬದಲ್ಲಿ ಕ್ಷಯ ರೋಗಿಗಳನ್ನ ಆರೈಕೆ ಮಾಡುವಾಗ ಸಹಕರಿಸಬೇಕು. ಯಾವುದೇ ರೀತಿಯ ಭೇದಗಳನ್ನು ಮಾಡಬಾರದು. ನಿಮ್ಮೊಡನೆ ನಾವಷ್ಟೇ ಅಲ್ಲ ಸಂಪೂರ್ಣ ಸಮುದಾಯದ ಬೆಂಬಲವಿರುತ್ತದೆ. ಯಾವುದೇ ಕಾರಣಕ್ಕೂ ಮಾತ್ರೆಯನ್ನು ತಪ್ಪಿಸದೆ ನುಂಗಿ ಟಿಬಿ ಚಾಂಪಿಯನ್ನಾಗಿ ಇತರರಿಗೆ ಮಾರ್ಗದರ್ಶಿಗಳಾಗಿ ಎಂದರು.

ಕಂಪನಿಯ ಸಿಎಸ್‌ಆರ್ ಮುಖ್ಯಸ್ಥ ಮಂಜುನಾಥ್ ಮಾತನಾಡಿ, ಸಮುದಾಯದ ಸೇವೆಗೆ ಆರೋಗ್ಯ ಇಲಾಖೆಯೊಂದಿಗೆ ಸದಾ ಕಾಲ ಕೈ ಜೋಡಿಸುತ್ತೇವೆ ಎಂದರು ಕಾರ್ಯಕ್ರಮದಲ್ಲಿ ಜಾನ್ ಮೈನ್ಸ್ ಡಿಜಿಎಂ ರಣದೇವ್, ಡೆಪ್ಯೂಟಿ ಮ್ಯಾನೇಜರ್ ಸುಭಾಷ್ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ, ಬಿ.ಮೂಗಪ್ಪ ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್, ನವೀನ್, ವೀರೇಶ್, ಇಸ್ಮಾಯಿಲ್, ನಾಗರಾಜ್, ಸುನಿಲ್, ದಂತ ವೈದ್ಯೆ ಡಾ.ಬಿಂದ್ಯಾ, ಆಶಾ ಕಾರ್ಯಕರ್ತೆಯರು, 35 ಟಿಬಿ ರೋಗದ ಪ್ರಕರಣದ ಫಲಾನುಭವಿಗಳು ಭಾಗವಹಿಸಿದ್ದರು. ಎಲ್ಲರಿಗೂ ಆಹಾರದ ಕಿಟ್‌ಗಳನ್ನು ವಿತರಿಸಲಾಯಿತು.

ಮತೀಯ ಶಕ್ತಿಗಳೊಂದಿಗೆ ಡಿ.ಕೆ.ಶಿವಕುಮಾರ್ ಕೈಜೋಡಿಸುವುದಿಲ್ಲ: ಮಾಜಿ ಸಂಸದ ಉಗ್ರಪ್ಪ

» ಚಿತ್ರದುರ್ಗ

ಪಕ್ಷ ನಿಷ್ಠರಾಗಿರುವ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವುದೇ ಕಾರಣಕ್ಕೂ ಮತೀಯ ಶಕ್ತಿಗಳೊಡನೆ ಕೈಜೋಡಿಸುವುದಿಲ್ಲವೆಂದು ಮಾಜಿ ಸಂಸದ ವಿ.ಎಸ್.ಉಗ್ರಪ್ಪ ಸ್ಪಷ್ಟಪಡಿಸಿದರು.

ಬಚ್ಚಬೋರನಹಟ್ಟಿ ಸಮೀಪವಿರುವ ಎಸ್.ಪಿ.ಆನಂದ್‌ರವರ ಕುರಿ ಫಾರಂನ್ನು ಗುರುವಾರ ವೀಕ್ಷಿಸಿದ ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಅವರು ಡಿ.ಕೆ.ಶಿ.ರವರು ಬಿಜೆಪಿ. ಸೇರುತ್ತಾರೆಂಬ ಊಹಾ ಪೋಹಗಳು ಸತ್ಯಕ್ಕೆ ದೂರವಾದುದು. ಬಿಜೆಪಿ. ಹಾಗೂ ಅವರ ರಾಜಕೀಯ ವೈರಿಗಳು ಹಬ್ಬಿಸುತ್ತಿರುವ ಇಂತಹ ಅಪ ಪ್ರಚಾರ ನಿಲ್ಲಬೇಕು. ಇಂದಿರಾಗಾಂಧಿ ಕುಟುಂಬಕ್ಕೆ ನಿಷ್ಠರಾಗಿರುವ ಡಿ.ಕೆ.ಶಿವಕುಮಾರ್‌ರವರು ಎಂದಿಗೂ ಅಧಿಕಾರಕ್ಕಾಗಿ ಆಸೆ ಪಟ್ಟವರಲ್ಲ. ಜಾತ್ಯಾತೀತ ಸಿದ್ಧಾಂತಗಳ ಮೇಲೆ ನಂಬಿಕೆಯಿಟ್ಟು ರಾಜಕೀಯ ಬದುಕು ಕಟ್ಟಿಕೊಂಡವರು. ಹೈಕಮಾಂಡ್ ನೀಡಿರುವ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. 2028 ರ ಚುನಾವಣೆಯು ನನ್ನ ನಾಯಕತ್ವದಲ್ಲಿಯೇ ನಡೆಯುತ್ತದೆಂದು

ಹೇಳಿರುವಾಗ ಬಿಜೆಪಿ. ಸೇರುವ ಮಾತೆಲ್ಲಿಂದ ಬಂತು. ಇದೆಲ್ಲಾ ವಿರೋಧಿಗಳ ಕುಹಕ ಎಂದು ಡಿ.ಕೆ.ಶಿ. ಬಗ್ಗೆ ವಿವಾದ ಹುಟ್ಟುಹಾಕುತ್ತಿರುವವರಿಗೆ ವಿ.ಎಸ್.ಉಗ್ರಪ್ಪ ತಿರುಗೇಟು ನೀಡಿದರು.

ಪಕ್ಷದಲ್ಲಿ ಯಾವುದೇ ಸ್ಥಾನಮಾನಗಳ ಬಗ್ಗೆ ಡಿ.ಕೆ.ಶಿವಕುಮಾರ್ ಎಂದಿಗೂ ಚಿಂತಿಸಿದವರಲ್ಲ. ಯಾವ ಕಾಲಘಟ್ಟದಲ್ಲಿ ಯಾರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂಬುದನ್ನು ಹೈಕಮಾಂಡ್ ನಿರ್ಧರಿಸುತ್ತದೆ. ಕಾಂಗ್ರೆಸ್ ಮೇಲೆ ಅಚಲವಾದ ನಂಬಿಕೆಯಿಟ್ಟಿರುವ ಅವರು ಎಂದಿಗೂ ಬಿಜೆಪಿ. ಕಡೆ ಮುಖ ಮಾಡಿದವರಲ್ಲ. ಪಕ್ಷದಲ್ಲಿಯೇ ಉಳಿದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಶಕ್ತಿಯಾಗಿರುತ್ತಾರೆಂದು ಹೇಳಿದರು. ಎಸ್.ಪಿ.ಆನಂದ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಈ ಸಂದರ್ಭದಲ್ಲಿದ್ದರು.

ಬೇಡಿಕೆ ಈಡೇರಿಸುವಂತೆ ದಸಂಸ ಡಿಸಿ ಕಚೇರಿ ಎದುರು ಪ್ರತಿಭಟನೆ

» ಚಿತ್ರದುರ್ಗ

ನ್ಯಾಯಮೂರ್ತಿ ಸದಾಶಿವ ಹಾಗೂ ಕಾಂತರಾಜ್ ಆಯೋಗದ ವರದಿಯನ್ನು ಸರ್ಕಾರ ಶೀಘ್ರವೇ ಅನುಷ್ಠಾನಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಶೋಷಿತರ ವಾದ) ಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಲಾಯಿತು. ಸದಾಶಿವ ಆಯೋಗ ಹಾಗೂ ಕಾಂತರಾಜ್ ಆಯೋಗದ ವರದಿ ಜಾರಿಯಾಗಿ ಹತ್ತದಿನ್ಯೆದು ವರ್ಷಗಳು ಕಳೆದಿದ್ದರೂ ಇಲ್ಲಿಯವರೆಗೂ ಆಡಳಿತ ನಡೆಸಿದ ಪಕ್ಷಗಳು ಈಗಿನ ಕಾಂಗ್ರೆಸ್ ಸರ್ಕಾರ ಅನುಷ್ಠಾನಗೊಳಿಸುವಲ್ಲಿ ಮೀನಾಮೇಷ ಎಣಿಸುತ್ತಿರುವುದರಿಂದ ಹಿಂದುಳಿದವರು, ದಲಿತರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಶೋಷಿತರು ಅತಂತ್ರ ಸ್ಥಿತಿಯಲ್ಲಿದ್ದಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಳ ಮೀಸಲಾತಿಯನ್ನು ಜಾರಿಗೆ ತರದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ಮಾತನಾಡಿ ಅನಾದಿ ಕಾಲದಿಂದಲೂ ಜೀವನೋಪಾಯಕ್ಕಾಗಿ ಕಂದಾಯ ಮತ್ತು ಅರಣ್ಯ ಇಲಾಖೆ ಭೂಮಿಯನ್ನು ಸಾಗುವಳಿ ಮಾಡುತ್ತಿರುವವರಿಗೆ ಅಕ್ರಮ–ಸಕ್ರಮ ಯೋಜನೆಯಡಿ ಸಾಗುವಳಿ ಪತ್ರಗಳನ್ನು ನೀಡಬೇಕು. ಯಾವುದೇ ಕಾರಣಕ್ಕೂ ಒಕ್ಕಲೆಬ್ಬಿಸಬಾರದು. ಇಪ್ಪತ್ತು ವರ್ಷಗಳ ಹಿಂದೆ ಜಿಲ್ಲಾಡಳಿತದಿಂದ 2 ಸಾವಿರ ನಿವೇಶನಗಳನ್ನು ವಿಂಗಡಿಸಲಾಗಿತ್ತು. ಅದರಲ್ಲಿ ನಿಜವಾದ ಬಡವರಿಗೆ ನಿವೇಶನಗಳು ಸಿಕ್ಕಿಲ್ಲ. ಕೊಳಗೇರಿಗಳಲ್ಲಿರುವವರಿಗೆ ಸ್ವಂತ ಮನೆಗಳಿಲ್ಲ. ಇದರ ಬಗ್ಗೆ ಸೂಕ್ತ ತನಿಖೆ ನಡೆಸಿ ಅರ್ಹರಿಗೆ ನಿವೇಶನಗಳನ್ನು ನೀಡಬೇಕೆಂದು ಒತ್ತಾಯಿಸಿದರು.

ಮೊಳಕಾಲ್ಮುರು ವಕೀಲರ ಸಂಘದ ಅಧ್ಯಕ್ಷ-ಉಪಾಧ್ಯಕ್ಷರಿಗೆ ಸನ್ಮಾನ

» ಚಿತ್ರದುರ್ಗ

ಮೊಳಕಾಲ್ಮರು ವಕೀಲರ ಸಂಘಕ್ಕೆ ನೂತನವಾಗಿ ಅಧ್ಯಕ್ಷರಾಗಿ ಪಿ.ಜಿ.ವಸಂತಕುಮಾರ್, ಉಪಾಧ್ಯಕ್ಷರಾಗಿ ಶಿವಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಎ.ಕೆ.ತಿಮ್ಮಪ್ಪ, ಸಹ ಕಾರ್ಯದರ್ಶಿಯಾಗಿ ಓ.ಮಹೇಶ್ ಇವರುಗಳು ಆಯ್ಕೆಯಾಗಿದ್ದಾರೆ. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿರವರು ಮೊಳಕಾಲ್ಮುರು ವಕೀಲರ ಸಂಘಕ್ಕೆ ನೂತನವಾಗಿ ಆಯ್ಕೆಯಾಗಿರುವವರನ್ನು ಸನ್ಮಾನಿಸಿದರು. ವಕೀಲರ ಸಂಘದ ಜಿಲ್ಲಾ ಉಪಾಧ್ಯಕ್ಷ ಅನಿಲ್‌ಕುಮಾರ್, ಹಿರಿಯ ವಕೀಲರುಗಳಾದ ಬೊಮ್ಮಣ್ಣ, ಚಿನ್ನಪ್ಪ, ಜಯಣ್ಣ, ತಿಪ್ಪೇಸ್ವಾಮಿ, ಶರಣಪ್ಪ, ಹನುಮಂತಪ್ಪ, ಬಾಬು ಇನ್ನು ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಲಂಬಾಣಿ ಹಟ್ಟಿಯಲ್ಲಿ ಐವತ್ತು ಲಕ್ಷ ರೂ.ವೆಚ್ಚದ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಭೂಮಿಪೂಜೆ.

ಪ್ರಮುಖ ಸುದ್ದಿ

ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣದ ಕಡೆಗೆ ಆಸಕ್ತಿ ವಹಿಸಿ

» ಚಿತ್ರದುರ್ಗ

ಲಂಬಾಣಿ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣದ ಕಡೆಗೆ ಹೆಚ್ಚು ಆಸಕ್ತಿ ವಹಿಸಬೇಕು ಎಂದು ಬಂಜಾರ (ಲಂಬಾಣಿ) ಸಮಾಜ (ರಿ)ನ ಜಿಲ್ಲಾಧ್ಯಕ್ಷರಾದ ಎಂ ಸತೀಶ್ ಕುಮಾರ್ ಕರೆ ನೀಡಿದರು.

ಹಿರಿಯೂರು ತಾಲೂಕಿನ ಜೆಜಿ ಹಳ್ಳಿ ಹೋಬಳಿಯ ಓಬಳಾಪುರ ಲಂಬಾಣಿ ತಾಂಡಾದಲ್ಲಿ ಸೇವಾಲಾಲ್ ತಾಂಡ ಆಭಿರುದ್ದಿ ಟ್ರಸ್ಟ್ (ರಿ) ಓಬಳಾಪುರ ತಾಂಡ ಇವರ ವತಿಯಿಂದ ಹಮ್ಮಿಕೊಂಡಿದ್ದ 286ನೇ ಸಂತ ಸೇವಾಲಾಲ್ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಎರ್ಪಡಿಸಿದ್ದ ಸೇವಾಲಾಲ್‌ರ ಮೆರವಣಿಗೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಯುವಕರು ಸೇವಾಲಾಲ್ ಮಹಾರಾಜರ ಆದರ್ಶ ಹಾಗೂ ತತ್ವಗಳನ್ನು ಪರಿಪಾಲನೆ ಮಾಡಬೇಕು. ಸ್ಪರ್ಧಾತ್ಮಕ ಜಗತ್ತಿನಲ್ಲಿ ಬುದ್ಧಿವಂತರು ಮಾತ್ರ ಮುಂದೆ ಬರಲು ಸಾಧ್ಯ. ಲಂಬಾಣಿ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣದ ಕಡೆಗೆ ಹೆಚ್ಚು ಆಸಕ್ತಿ ವಹಿಸಬೇಕು. ಶಿಕ್ಷಣ, ಹೋರಾಟ ಮತ್ತು ಸಂಘಟನೆಯಿದ್ದಲ್ಲಿ ಜಯ ದೊರಕಲಿದೆ

ಎಂದರು.

ಸಂತ ಸೇವಾಲಾಲರ ಸಮಾಜಮುಖಿ ಚಿಂತನೆ ಅನುಕರಣೀಯ ಅಗತ್ಯವಾಗಿದೆ